# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..    ಕನ್ನಡ ವಾರಪತ್ರಿಕೆ




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 11-07-2025 to 17-07-2025 ಬೆಲೆ: 7-00 ಸಂಪುಟ–5 ಸಂಚಿಕೆ–03 ಪುಟಗಳು–6

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು







ದಕ್ಷಿಣ ಕನ್ನಡ ಜಿಲ್ಲೆಗೆ ಮರು ನಾಮಕರಣ ಮಾಡಬೇಕೆಂಬ ಕೂಗು ಹೆಚ್ಚಾಗಿದೆ. ಜಿಲ್ಲೆಗೆ "ಮಂಗಳೂರು" ಜಿಲ್ಲೆ ಸೂಕ್ತ ಎನ್ನುವುದು ಹೆಚ್ಚಿನ ವರ ಅಂಬೋಣವಾದರೂ, ಅಲ್ಲೊಬ್ಬ, ಇಲ್ಲೊಬ್ಬರು "ತುಳುನಾಡು" ಜಿಲ್ಲೆ ಆದರೆ ಚೆನ್ನಾಗಿರುತ್ತದೆ ಎನ್ನುತ್ತಾರೆ. ಅದಕ್ಕೆ ಅವರು ಕೊಡುವ ಕಾರಣ, ಈಗಾಗಲೇ ತುಳುನಾಡು ರಾಜ್ಯ ಬೇಕು ಎನ್ನುವ ಕೂಗು ತುಳು ಸಂಘಟನೆಗಳಿಂದ ಕೇಳಿ ಬರುತ್ತಿದೆ. ಮುಂದೆ ಏನಾದರೂ ಅಂತಹ ಸನ್ನಿವೇಶ ಬಂದರೆ ಈಗಿನ ಮಂಗಳೂರು ಜಿಲ್ಲೆಯ ಹೆಸರು ಬದಲಾಯಿಸುವುದು ಕಷ್ಟ ಆಗಬಹುದು. ಆದರೆ ಮರುನಾಮಕರಣದ ಹೋರಾಟ ಸಮಿತಿಯ ಪ್ರಕಾರ ಹೆಚ್ಚಿನವರ ಒಲವು ಮಂಗಳೂರು ಜಿಲ್ಲೆಯೇ ಆಗಿದೆ. ಅದರ ಜೊತೆ ಪರವೂರಿನಲ್ಲಿ ನೆಲೆಸಿರುವ ದಕ್ಷಿಣ ಕನ್ನಡದ ಜನ ತಮ್ಮನ್ನು ಪರಿಚಯಿಸಿಕೊಳ್ಳುವಾಗ ಮಂಗಳೂರಿಗರಾಗಿಯೇ ಗುರುತಿಸಿಕೊಳ್ಳಲು ಇಷ್ಟ ಪಡುತ್ತಾರೆ. ಇದು ಸತ್ಯವೂ ಕೂಡ.

## 1975ರ ತುರ್ತು ಪರಿಸ್ಥಿತಿ 'ಕರಾಳ ಅಧ್ಯಾಯ' –ತರೂರ್



**ಹೊಸದಿಲ್ಲಿ:** 1975ರ ತುರ್ತು ಪರಿಸ್ಥಿತಿಯನ್ನು ಭಾರತದ ಇತಿಹಾಸದಲ್ಲಿ "ಕರಾಳ ಅಧ್ಯಾಯ" ಎಂದು ಹೇಳುವ ಮೂಲಕ ಕಾಂಗ್ರೆಸ್ ಸಂಸದ ಶಶಿ ತರೂರ್ ಮತ್ತೊಮ್ಮೆ ಪಕ್ಷದ ನಾಯಕರ ಆಕ್ರೋಶಕ್ಕೆ ಕಾರಣರಾಗಿದ್ದು, ಕಾಂಗ್ರೆಸ್ಸಿಗರೇ ಅಚ್ಚರಿ ಪಡುವಂತೆ ಮಾಡಿದ್ದಾರೆ. ಅಷ್ಟೇ ಅಲ್ಲದೆ ಶಶಿ ತರೂರು ಈ ನಡುವೆ ಬಿಜೆಪಿಯತ್ತ ಅದರಲ್ಲೂ ಮೋದಿಜಿ ಜೊತೆ ನಿಕಟವಾಗಿದ್ದಾರೆ ಎನ್ನುವುದಕ್ಕೆ ಪುಷ್ಟಿ ನೀಡಿದಂತಾಗಿದೆ. ಮಲಯಾಳಂ ದಿನಪತ್ರಿಕೆಯೊಂದರಲ್ಲಿ ಪ್ರಕಟಿಸಿದ ಲೇಖನದಲ್ಲಿ, ಇಂದಿರಾ ಗಾಂಧಿ **3ನೇ ಪುಟಕ್ಕೆ**

## ಶಾಂತಿ ಮರುಸ್ಥಾಪನೆಯಾಗಬೇಕು –ಪರಮೇಶ್ವರ್

**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಂತಿ ಮರುಸ್ಥಾಪನೆಯಾಗಬೇಕು. ಇಲ್ಲಿ ಯಾರೂ ಭಯದ ವಾತಾವರಣದಲ್ಲಿ ಬದುಕುವ ಸ್ಥಿತಿ ಬರಬಾರದು. ಅದಕ್ಕೆ ಯಾವತ್ತೂ ಅವಕಾಶ ನೀಡಬಾರದು ಎಂದು ಗ್ರಹ ಸಚಿವ ಡಾ. ಜಿ ಪರಮೇಶ್ವರ್ ಹೇಳಿದ್ದಾರೆ. ಅವರು ಜಿಲ್ಲೆಯಲ್ಲಿ ಶಾಂತಿ ಸೌಹಾರ್ದ ಕಾಪಾಡುವ ಕುರಿತು ಚರ್ಚಿಸಲು ಇಲ್ಲಿ ಏರ್ಪಡಿಸಿದ್ದ ಸಭೆಯ ನಂತರ 'ಜಿಲ್ಲೆಯ ಜನರಿಗೆ ಸೌಹಾರ್ದದ ಸಂದೇಶ ರವಾನಿಸುವ ಅಗತ್ಯವಿತ್ತು. ಈ ಸಭೆಯ ಮೂಲಕ ಅದು ಈಡೇರಿದೆ. ಧಾರ್ಮಿಕ ಮುಖಂಡರನ್ನು ಸೇರಿಸಿ ಸಾಮಾಜಿಕ ಸೌಹಾರ್ದ ರ್‍ಯಾಲಿ **3ನೇ ಪುಟಕ್ಕೆ**



## ರಾಜ್ಯದಲ್ಲಿ ಹದೆಗೆಟ್ಟ ಕಾನೂನು ವ್ಯವಸ್ಥೆ –ಸುನೀಲ್ ಕುಮಾರ್

**ಕಾರ್ಕಳ:** ರಾಜ್ಯದಲ್ಲಿ ಮಂಗಳವಾರ ತಡ ರಾತ್ರಿ ನಡೆದ ಎನ್‌ಐಎ ದಾಳಿ ಕಾನೂನು ಸುವ್ಯವಸ್ಥೆ ಹಾಗೂ ಗೃಹ ಇಲಾಖೆಯ ದಕ್ಷತೆ ಪಾತಾಳ ತಲುಪಿರುವುದನ್ನು ಬೆತ್ತಲೆಗೊಳಿಸಿದೆ ಎಂದು ಶಾಸಕ ವಿ. ಸುನೀಲ್ ಕುಮಾರ್ ಟೀಕಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಸರ್ಕಾರಿ ನೌಕರರೇ ಅದರಲ್ಲೂ ವಿಶೇಷವಾಗಿ ಪೊಲೀಸ್ ಇಲಾಖೆಯ ಸಹಾಯಕ ಸಬ್ ಇನ್ಸ್ಪೆಕ್ಟರ್ ಹಾಗೂ ಕಾರಾಗೃಹದ ಸಿಬ್ಬಂದಿ ಅಂತಾರಾಷ್ಟ್ರೀಯ ಭಯೋತ್ಪಾದಕರ ಜತೆ ಕೈ **3ನೇ ಪುಟಕ್ಕೆ**








## ಜಿಲ್ಲೆಯಲ್ಲಿ ಶಾಂತಿ ಮರುಸ್ಥಾಪನೆಯಾಗಬೇಕು–ಪರಮೇಶ್ವರ್

ಒಂದನೇ ಪುಟದಿಂದ......

ನಡೆಸುವ ಬಗ್ಗೆ ಚರ್ಚಿಸಿ ತೀರ್ಮಾನಿಸುತ್ತೇವೆ'. ಮತೀಯ ಗೂಂಡಾಗಿರಿ ನಡೆಸಬಾರದು. ಗೋಹತ್ಯೆ ನಡೆದರೆ, ಗೋವುಗಳ ಅಕ್ರಮ ಸಾಗಾಟ ಕಂಡುಬಂದರೆ ಪೊಲಿಸರಿಗೆ ಮಾಹಿತಿ ನೀಡಬೇಕು. ಅದನ್ನು ಬಿಟ್ಟು ನೈತಿಕ ಪೊಲೀಸ್‌ಗಿರಿ ರಿಯಲ್ಲ. ಯಾರೂ ಕಾನೂನನ್ನು ಕೈಗೆತ್ತಿಕೊಳ್ಳಬಾರದು ಎಂದರು. ಜಿಲ್ಲೆಯ ಕೆಂಪು ಕಲ್ಲು ಸಮಸ್ಯೆ ಕುರಿತು ಪ್ರತಿಕ್ರಿಯಿಸಿದ ಅವರು, ಸರ್ಕಾರಕ್ಕೆ ಪಾವತಿಯಾಗಬೇಕಾದ ತೆರಿಗೆ ಕಟ್ಟಿ, ಪರವಾನಗಿ ಪಡೆದು ಅಧಿಕೃತವಾಗಿ ಕೆಂಪು ಕಲ್ಲು ತೆಗೆಯುವುದಕ್ಕೆ ಅಡ್ಡಿ ಇಲ್ಲ. ರಾಯಧನ ಹೆಚ್ಚಾಗಿದೆ ಎಂಬ ದೂರು ಇದ್ದರೆ ಸಂಬಂಧಪಟ್ಟ ಸಚಿವರ ಜೊತೆ ಮಾತನಾಡಿ ಬಗೆಹರಿಸಿಕೊಳ್ಳಬೇಕು. ಆದರೆ ಅಕ್ರಮ ಗಣಿಗಾರಿಕೆಗೆ ಅವಕಾಶ ನೀಡಲಾಗದು ಎಂದರು. ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, 'ಸಂಘಟನೆಗಳ ಅತಿರೇಕದ ನಿಲುವು ಸಂಘರ್ಷಕ್ಕೆ ಕಾರಣವಾಗಬಾರದು. ರಾಜಕೀಯ ಕಾರ್ಯಸೂಚಿಗಳು ಹಿಂಸೆಗೆ, ದ್ವೇಷಕ್ಕೆ ದಾರಿ ಮಾಡಿಕೊಡಬಾರದು' ಎಂದರು. ವಿಧಾನ ಸಭಾಧ್ಯಕ್ಷ ಯು.ಟಿ. ಖಾದರ್, 'ಭಿನ್ನಾಭಿಪ್ರಾಯಗಳನ್ನು ದೂರ ಇಟ್ಟು ಸಾಮರಸ್ಯ ಸಾಧಿಸಲಾಗದು. ಯಾರೂ ಸಮಸ್ಯೆಯ ಭಾಗ ಆಗದೇ, ಪರಿಹಾರದ ಭಾಗವಾಗಬೇಕು' ಎಂದರು.

## 1975ರ ತುರ್ತು ಪರಿಸ್ಥಿತಿ 'ಕರಾಳ ಅಧ್ಯಾಯ' – ಶಶಿ ತರೂರ್

ಒಂದನೇ ಪುಟದಿಂದ......

ಪ್ರಧಾನಿಯಾಗಿದ್ದಾಗ ವಿಧಿಸಿದ್ದ 1975ರ ತುರ್ತು ಪರಿಸ್ಥಿತಿಯನ್ನು ಭಾರತದ ಇತಿಹಾಸದಲ್ಲಿ "ಕರಾಳ ಅಧ್ಯಾಯ" ಎಂದಿರುವ ಶಶಿ ತರೂರ್, ಶಿಸ್ತು ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ಕೈಗೊಂಡ ಪ್ರಯತ್ನಗಳು ಅನ್ಯಾಯದ ಕ್ರೌರ್ಯ ಕೃತ್ಯಗಳಾಗಿ ಬದಲಾಯಿತು ಎಂದು ಬರೆದಿದ್ದಾರೆ. ಇಂದಿರಾ ಗಾಂಧಿ ಅವರ ಪುತ್ರ ಸಂಜಯ್ ಗಾಂಧಿ ಅವರು ಬಲವಂತದ ಸಂತಾನಹರಣ ಅಭಿಯಾನಗಳನ್ನು ನಡೆಸಿದರು. ಈ ಅವಧಿಯ ಕುಕೃತ್ಯಕ್ಕೆ ಇದೊಂದು ದೊಡ್ಡ ಉದಾಹರಣೆಯಾಗಿದೆ. ಈ ಗುರಿಯನ್ನು ಸಾಧಿಸಲು ಬಡ ಗ್ರಾಮೀಣ ಭಾಗದಲ್ಲಿ ಹಿಂಸೆ ಮತ್ತು ಬಲವಂತದಿಂದ ಸಂತಾನಹರಣ ಮಾಡಿಸಲಾಗುತ್ತಿತ್ತು. ದಿಲ್ಲಿಯಂತಹ ನಗರಗಳಲ್ಲಿ ಕೊಳಗೇರಿಗಳನ್ನು ಕರುಣೆಯೇ ಇಲ್ಲದೆ ನೆಲಸಮಗೊಳಿಸಲಾಯಿತು. ಸಾವಿರಾರು ಜನರನ್ನು ನಿರಾಶ್ರಿತರನ್ನಾಗಿ ಮಾಡಲಾಯಿತು. ಅವರ ಯೋಗಕ್ಷೇಮವನ್ನು ಗಣನೆಗೆ ತೆಗೆದುಕೊಳ್ಳಲಾಗಿಲ್ಲ ಎಂದು ತರೂರ್ ಹೇಳಿದ್ದಾರೆ. ಇಂದಿನ ಭಾರತ 1975ರ ಭಾರತವಲ್ಲ. ನಾವು ಹೆಚ್ಚು ಆತ್ಮವಿಶ್ವಾಸವುಳ್ಳ, ಹೆಚ್ಚು ಅಭಿವೃದ್ಧಿ ಹೊಂದಿದ ಮತ್ತು ಹಲವು ವಿಧಗಳಲ್ಲಿ ಬಲವಾದ ಪ್ರಜಾಪ್ರಭುತ್ವವನ್ನು ಹೊಂದಿದ್ದೇವೆ. ಅಧಿಕಾರ ಕೇಂದ್ರೀಕರಣ, ಭಿನ್ನಾಭಿಪ್ರಾಯಗಳನ್ನು ಹತ್ತಿಕ್ಕುವ ಮತ್ತು ಸಾಂವಿಧಾನಿಕ ಹಕ್ಕುಗಳನ್ನು ಕಸಿದುಕೊಳ್ಳುವ ಅಪಾಯಗಳಿವೆ. ರಾಷ್ಟ್ರದ ಹಿತಾಸಕ್ತಿ ಅಥವಾ ಸ್ಥಿರತೆಯ ಹೆಸರಿನಲ್ಲಿ ಇಂಥ ಪ್ರವೃತ್ತಿಗಳು ಮತ್ತೆ ಮರುಕಳಿಸುವ ಸಾಧ್ಯತೆಗಳಿವೆ. ಇಂಥ ಸಂದರ್ಭಗಳಲ್ಲಿ ತುರ್ತು ಪರಿಸ್ಥಿತಿ ನಮಗೆ ಎಚ್ಚರಿಕೆಯಾಗಿದೆ . ಹೀಗಾಗಿ ಪ್ರಜಾಪ್ರಭುತ್ವದ ರಕ್ಷಕರು ಯಾವಾಗಲೂ ಜಾಗರೂಕರಾಗಿರಬೇಕು ಎಂದು ಶಶಿ ತರೂರ್ ಹೇಳಿದ್ದಾರೆ.

## ರಾಜ್ಯದಲ್ಲಿ ಹದೆಗೆಟ್ಟ ಕಾನೂನು ವ್ಯವಸ್ಥೆ –ಸುನೀಲ್ ಕುಮಾರ್

ಒಂದನೇ ಪುಟದಿಂದ......

ಜೋಡಿಸಿ ಸದ್ದಿಲ್ಲದೇ ಉಗ್ರ ಚಟುವಟಿಕೆಗೆ ಪೋಷಣೆ ನೀಡಿದ್ದು ಆತಂಕಕಾರಿಯಷ್ಟೇ ಅಲ್ಲ, ಸರ್ಕಾರದ 'ಟೆರರ್ ಸಾಫ್ಟ್ ಕಾರ್ನರ್' ಧೋರಣೆಯ ಪ್ರತಿಬಿಂಬ" ಎಂದು ಆರೋಪಿಸಿದ್ದಾರೆ. ಗೃಹ ಸಚಿವರ ಕಣ್ಣಂಚಿನಲ್ಲೇ ಇಂಥ ವಿದ್ಯಮಾನ ನಡೆದಿದ್ದರೂ ರಾಜ್ಯ ಪೊಲೀಸರು ಕೈಕಟ್ಟಿ ಕುಳಿತಿದ್ದು ನಾಚಿಕೆಗೇಡಿನ ಸಂಗತಿ. ಮುಖ್ಯಮಂತ್ರಿ ಖುರ್ಚಿಗಾಗಿ ನಡೆಯುತ್ತಿರುವ ಸಂಗ್ರಾಮದಲ್ಲಿ ರಾಜ್ಯದ ಭವಿಷ್ಯವನ್ನು ಸ್ಫೋಟಗೊಳಿಸಬೇಡಿ. ಕಿಂಚಿತ್ತಾದರೂ ಜವಾಬ್ದಾರಿ ತೋರಿ" ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. "ಭಯೋತ್ಪಾದಕ ಸಂಘಟನೆಗಳ ಜತೆಗಿನ ನಂಟು, ಹಿಂದೂ ಕಾರ್ಯಕರ್ತರ ಹತ್ಯೆ ಸೇರಿದಂತೆ ಜಿಹಾದಿಗಳ ಪ್ರತ್ಯಕ್ಷ, ಪರೋಕ್ಷ ಕೈವಾಡವಿರುವ ಪ್ರಕರಣಗಳನ್ನು ಬೇಧಿಸುವುದಕ್ಕೆ ರಾಜ್ಯ ಪೊಲೀಸರಿಗೆ ಏಕೆ ಸಾಧ್ಯವಾಗುತ್ತಿಲ್ಲ. ಪ್ರತಿ ಬಾರಿಯೂ ಎನ್‌ಐಎ ಅಧಿಕಾರಿಗಳು ಈ ಷಡ್ಯಂತ್ರ ಬಯಲಿಗೆಳೆಯುತ್ತಿದ್ದಾರೆ ಎಂದರು.

## ಅಗ್ನಿವೀರ್ ವಾಯು ಪ್ರವೇಶ ಆಯ್ಕೆ ಪರೀಕ್ಷೆಗೆ ಅರ್ಜಿ ಆಹ್ವಾನ

ಮಡಿಕೇರಿ – ಭಾರತೀಯ ವಾಯು ಪಡೆಯಿಂದ ಅಗ್ನಿಪತ್ ಯೋಜನೆಯಡಿಯಲ್ಲಿ ಅಗ್ನಿವೀರ್ ವಾಯು ಪ್ರವೇಶ ಆಯ್ಕೆ ಪರೀಕ್ಷೆಗಾಗಿ ಅವಿವಾಹಿತ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಮಡಿಕೇರಿ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಮಂಜುನಾಥ್ ಅವರು ತಿಳಿಸಿದ್ದಾರೆ.

## ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

ಮಂಗಳೂರು :– 2025–26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಪ್ರಕ್ರಿಯೆ ಪ್ರಾರಂಭಗೊಂಡಿದ್ದು, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ವೆಬ್‌ಸೈಟ್ www.sw.kar.nic.in ಮೂಲಕ ಹಾಗೂ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ವೆಬ್‌ಸೈಟ್ www.twd.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು.

## ಕೃಷಿ ಪ್ರಶಸ್ತಿಗೆ ರೈತರಿಂದ ಅರ್ಜಿ ಆಹ್ವಾನ

ಮಂಗಳೂರು–ಕೃಷಿ ಪ್ರಶಸ್ತಿ–ಕೃಷಿ ಉತ್ಪಾದನಾ ಬಹುಮಾನ ಯೋಜನೆಯನ್ನು ಕೃಷಿ ಇಲಾಖಾ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಆಸಕ್ತ ರೈತರು ಕೆ–ಕಿಸಾನ್ ಪೋರ್ಟಲ್‌ನ Citizen Login CxÀªÁ RSK Login ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ / ನಾಗರೀಕ ಸೇವಾ ಕೇಂದ್ರ/ ಸ್ವತಃ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಅಗತ್ಯ ದಾಖಲಾತಿಗಳೊಂದಿಗೆ ರೈತರ FID( Fruits Identification) ಯನ್ನು ಬಳಸಿಕೊಂಡು ಆನ್‌ಲೈನ್ ಮೂಲಕ ಆಗಸ್ಟ್ 30 ರೊಳಗಾಗಿ ಅರ್ಜಿಸಲ್ಲಿಸಬಹುದು.

## ಉತ್ತಮ ಶಿಕ್ಷಕ ಪ್ರಶಸ್ತಿ : ಅರ್ಜಿ ಆಹ್ವಾನ

ಮಂಗಳೂರು – "ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ"ಗೆ ಭಾರತ ಸರ್ಕಾರದ ಶಿಕ್ಷಣ ಸಚಿವಾಲಯದ ವ್ಯಾಪ್ತಿಯ ಎಲ್ಲಾ ಅಧಿಕೃತ ಶಾಲೆಗಳ ಶಿಕ್ಷಕರು, ಉಪನ್ಯಾಸಕರು, ಮುಖ್ಯೋಪಾಧ್ಯಾಯರು, ಪ್ರಾಂಶುಪಾಲರು ಅರ್ಜಿ ಸಲ್ಲಿಸಬಹುದು. ಜುಲೈ 13ರೊಳಗೆ ನೋಂದಾಯಿಸಿಕೊಂಡು ಜುಲೈ 15 ರೊಳಗೆ ಅರ್ಜಿ ಸಲ್ಲಿಸಬೇಕು. ವೆಬ್‌ಸೈಟ್ https://nationalawardstoteachers.education.gov.in ಅರ್ಜಿ ಸಲ್ಲಿಸಬಹುದು. ಸೆಪ್ಟೆಂಬರ್ 5 ರಂದು ನವದೆಹಲಿಯಲ್ಲಿ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುತ್ತದೆ.

## ವಿಕಲಚೇತನರ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

ಶಿವಮೊಗ್ಗ : ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು 2025–26ನೇ ಸಾಲಿನ ಮೆಟ್ರಿಕ್ ಪೂರ್ವ ಮತ್ತು ನಂತರದ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನಕ್ಕಾಗಿ ಆನ್‌ಲೈನ್ ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಶಿವಮೊಗ್ಗ, ದೂರವಾಣಿ ಸಂಖ್ಯೆ : 08182–251676, ಹಾಗೂ ಶಿವಮೊಗ್ಗ – 9980150110 ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೂರ್ವ ತರಬೇತಿ ಪಡೆಯಲು ಆನ್‌ಲೈನ್ ಅರ್ಜಿ ಆಹ್ವಾನ

ಶಿವಮೊಗ್ಗ : ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯು 2025–26ನೇ ಸಾಲಿಗೆ ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ ಯುಪಿಎಸ್‌ಸಿ/ಕೆಎಎಸ್ ಗೆಜೆಟೆಡ್ ಪ್ರೊಬೇಷನಲ್ ವಸತಿಯುಕ್ತ ಪರೀಕ್ಷಾ ಪೂರ್ವ ತರಬೇತಿಯನ್ನು ಬೆಂಗಳೂರಿನ ಹಜ್ ಭವನದಲ್ಲಿ ಹಾಗೂ ಕೆಪಿಎಸ್‌ಸಿ ಗ್ರೂಪ್ 'ಸಿ' ಆರ್‌ಆರ್‌ಬಿ ಮತ್ತು ಎಸ್‌ಎಸ್‌ಸಿ ಪರೀಕ್ಷಾ ಪೂರ್ವ ತರಬೇತಿಯುನ್ನು ಪ್ರತಿಷ್ಠಿತ ಸಂಸ್ಥೆಗಳ ಮೂಲಕ ನೀಡಲಾಗುತ್ತಿದ್ದು, ಅರ್ಹ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ https://dom.karnataka.gov.inನ್ನು ಅಥವಾ ಜಿಲ್ಲಾ ಕಚೇರಿಯನ್ನು ಖುದ್ದಾಗಿ ಹಾಗೂ ದೂ.ಸಂ.: 08182–220206 ನ್ನು ಹಾಗೂ ಶಿವಮೊಗ್ಗ ಅಲ್ಪಸಂಖ್ಯಾತರ ಜಿಲ್ಲಾ ಮಾಹಿತಿ ಕೇಂದ್ರದ ದೂ.ಸಂ– 7676888388 ಸಂಪರ್ಕಿಸುವುದು.

## ಅಧ್ಯಯನ ಶಿಬಿರಕ್ಕೆ ಅರ್ಜಿ ಆಹ್ವಾನ

ಮಡಿಕೇರಿ : ಕರ್ನಾಟಕ ಸಾಹಿತ್ಯ ಅಕಾಡೆಮಿಯು ಪತ್ರಕರ್ತರಿಗೆ ಕನ್ನಡ ಸಾಹಿತ್ಯ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಆಗಸ್ಟ್ 3ನೇ ವಾರ ಅಥವಾ ಕೊನೆಯ ವಾರದಲ್ಲಿ ನಡೆಸಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ http://sahithyaacademy.karnataka.gov.in ಇಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ವೆನ್ಲಾಕ್ ಆಯುಷ್ ವಿಭಾಗದಲ್ಲಿ ಅಂತರಾಷ್ಟ್ರೀಯ ವೈದ್ಯರ ದಿನಾಚರಣೆ



ಮಂಗಳೂರು: ಕರ್ನಾಟಕ ಸರ್ಕಾರಿ ಆಯುಷ್ ವೈದ್ಯಾಧಿಕಾರಿ ಸಂಘದ ದಕ್ಷಿಣ ಕನ್ನಡ ಜಿಲ್ಲಾ ಘಟಕ,ವೆನ್ಲಾಕ್ ಆವರಣದ ಜಿಲ್ಲಾ ಆಯುಷ್ ಆಸ್ಪತ್ರೆಯಲ್ಲಿ ಹಮ್ಮಿಕೊಂಡ ರಾಷ್ಟ್ರೀಯ ವೈದ್ಯರ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ವೆನ್ಲಾಕ್ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಶಿವಕುಮಾರ್ ವೈದ್ಯಕೀಯ ಕ್ಷೇತ್ರದಲ್ಲಿ ಸಾಕಷ್ಟು ಸವಾಲಿದೆ. ಈ ನಡುವೆ ರೋಗಿಗೆ ಮಾನಸಿಕ ಸ್ಥೈರ್ಯ ನೀಡಿ ರೋಗಿಯ ಆರೈಕೆ ಮಾಡುವುದು ಮುಖ್ಯ. ಸಾಕಷ್ಟು ಚಿಕಿತ್ಸೆಗೆ ವೈದ್ಯರು ಮತ್ತು ರೋಗಿಯ ನಡುವಿನ ಸಂವಹನ ಮುಖ್ಯ ಎಂದರು. ಲೇಡಿಗೋಶನ್ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ದುರ್ಗಾಪ್ರಸಾದ್ ಮಾತನಾಡುತ್ತಾ ವೈದ್ಯರ ಮೇಲೆ ನಂಬಿಕೆ ಮುಖ್ಯ ಸಮಾಜದ ಹಿತಚಿಂತನೆಯೊಂದಿಗೆ ವೈದ್ಯಕೀಯ ಸೇವೆ ಅಗತ್ಯವಿದೆ ಎಂದರು. ಜಿಲ್ಲಾ ಆಯುಷ್ ಅಧಿಕಾರಿ ಡಾ. ಮುಹಮ್ಮದ್ ಇಕ್ಬಾಲ್ ಸ್ವಾಗತಿಸಿ, ಡಾ.ದೇವದಾಸ್ ಪ್ರಾಸ್ತಾವಿಕವಾಗಿ ಮಾತನಾಡಿದರು.

## 2000 ಕೋಟಿಗೂ ಹೆಚ್ಚು ಅನುದಾನ ತಂದಿದ್ದೇನೆ : ಅಶೋಕ್ ರೈ



ಉಪ್ಪಿನಂಗಡಿ: ಶಾಸಕನಾಗಿ ಎರಡು ವರ್ಷದಲ್ಲಿ ಪುತ್ತೂರು ವಿಧಾನ ಸಭಾ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗಾಗಿ ಎರಡು ಸಾವಿರದ ಆರು ಕೋಟಿ ರೂ. ಅನುದಾನವನ್ನು ತಂದಿದ್ದೇನೆ. ಇತಿಹಾಸದಲ್ಲಿ ಆಗದ ಅಭಿವೃದ್ಧಿ ಕಾಮಗಾರಿಗಳು ಪುತ್ತೂರು ವಿಧಾನ ಸಭಾ ಕ್ಷೇತ್ರದಲ್ಲಿ ನಡೆಯಲಿವೆ. ಆದರೆ ಬಿಜೆಪಿಯವರು ಸುಳ್ಳು ಮತ್ತು ಧರ್ಮದ ರಾಜಕಾರಣ ಮಾಡುವ ಮೂಲಕ ಜನರ ಮನಸ್ಸನ್ನು ಪರಿವರ್ತಿಸುವ ಕೆಲಸ ಮಾಡುತ್ತಿದ್ದಾರೆ, ರಾಜಕೀಯ ರಹಿತವಾಗಿ ಕ್ಷೇತ್ರದ ಅಭಿವೃದ್ಧಿಯ ಮೂಲಕವೇ ತಕ್ಕ ಉತ್ತರ ನೀಡುವ ಕೆಲಸ ಕಾಂಗ್ರೆಸ್‌ನಿಂದಾಗಲಿದೆ ಎಂದು ಶಾಸಕ ಅಶೋಕ್ ಕುಮಾರ್ ರೈ ಹೇಳಿದರು. ಉಪ್ಪಿನಂಗಡಿಯಲ್ಲಿ ನಡೆದ 'ಬಿಜೆಪಿಯ ಸುಳ್ಳುಗಳಿಗೆ ಕಾಂಗ್ರೆಸ್ ಉತ್ತರ'ವೆಂಬ ಜನಜಾಗೃತಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸುಳ್ಳುಗಳನ್ನೇ ಹೇಳುತ್ತಾ ಹೋದರೆ ಜನರ ಮನಸ್ಸು ಕೂಡಾ ಪರಿವರ್ತನೆ ಆಗುವುದು ಸಹಜ. ಅದ್ದರಿಂದ ಕಾಂಗ್ರೆಸ್ ಕಾರ್ಯಕರ್ತರು ಕಾಂಗ್ರೆಸ್ ಸರಕಾರದ ಕೊಡುಗೆಯೇನು ಎಂಬುದನ್ನು ಜನತೆಗೆ ಮನವರಿಕೆ ಮಾಡುವ ಕಾರ್ಯ ಮಾಡಬೇಕು ಎಂದರು.

## ಹೈಕೋರ್ಟ್‌ನಲ್ಲಿ ವಾದಿಸಲು ಕಾನೂನು ಅಧಿಕಾರಿಗಳ ಸಮಿತಿ ರಚನೆ



ಮಂಗಳೂರು : ಮಂಗಳೂರು ನಗರ ಮತ್ತು ದ.ಕ.ಜಿಲ್ಲಾ ಪೊಲೀಸ್ ಇಲಾಖೆಯ ವ್ಯಾಪ್ತಿಯಲ್ಲಿ ನಡೆಯುವ ಕೋಮು ಸೂಕ್ಷ್ಮಕ್ರಿಮಿನಲ್ ಪ್ರಕರಣಗಳಿಗೆ ಸಂಬಂಧಿಸಿದಂತೆ ರಾಜ್ಯ ಸರಕಾರವನ್ನು ಹೈಕೋರ್ಟ್ ಮುಂದೆ ಪ್ರತಿನಿಧಿಸಲು ಐವರನ್ನು ಒಳಗೊಂಡ ಕಾನೂನು ಅಧಿಕಾರಿಗಳ ಸಮಿತಿಯನ್ನು ರಚಿಸಿ ರಾಜ್ಯ ಗೃಹ ಇಲಾಖೆಯು ಮಹತ್ವದ ಆದೇಶ ಹೊರಡಿಸಿದೆ. ದ.ಕ.ಜಿಲ್ಲೆಯಲ್ಲಿ ಕೋಮು ಉದ್ವಿಗ್ನತೆಯಂತಹ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಹೈಕೋರ್ಟ್ ಮುಂದೆ ಸರಕಾರವನ್ನು ಪರಿಣಾಮಕಾರಿಯಾಗಿ ಪ್ರತಿನಿಧಿಸಲು ರಾಜ್ಯ ಪೊಲೀಸ್ ಮಹಾನಿರ್ದೇಶಕರು ಸಾರ್ವಜನಿಕ ಅಭಿಯೋಜಕರು ಮತ್ತು ಹೆಚ್ಚುವರಿ ಅಡ್ವಕೇಟ್ ಜನರಲ್ ಅವರನ್ನು ನೇಮಿಸಲು ಕೋರಿಕೊಂಡಿದ್ದರು. ಅದರಂತೆ ಸರಕಾರವು ಜಿಲ್ಲೆಯಲ್ಲಿ ಉದ್ಭವಿಸುವ ಎಲ್ಲಾ ಸೂಕ್ಷ್ಮ ಪ್ರಕರಣಗಳ ಬಗ್ಗೆ ಹೈಕೋರ್ಟ್‌ನಲ್ಲಿ ವಾದಿಸಲು ಕಾನೂನು ಅಧಿಕಾರಿಗಳ ಸಮಿತಿಯನ್ನು ರಚಿಸಿದೆ. ಈ ಸಮಿತಿಗೆ ಸ್ಟೇಟ್ ಪಬ್ಲಿಕ್ ಪ್ರಾಸಿಕ್ಯೂಟರ್ ಬಿ.ಎ.ಬೆಳ್ಳಿಯಪ್ಪ ಅಡಿಷನಲ್ ಅಡ್ವಕೇಟ್ ಜನರಲ್‌ಗಳಾದ ಶಾಹುಲ್ ಹಮೀದ್ ರೆಹ್ಮಾನ್ ಮತ್ತು ಪ್ರದೀಪ್ ಸಿ.ಎಸ್., ಅಡಿಷನಲ್ ಸ್ಟೇಟ್ ಪಬ್ಲಿಕ್ ಪ್ರಾಸಿಕ್ಯೂಟರ್‌ಗಳಾದ ಅಸ್ಮಾ ಕೌಸರ್, ರಶ್ಮಿ ಜಾದವ್ ಅವರನ್ನು ನೇಮಿಸಿ ಆದೇಶ ಹೊರಡಿಸಿದೆ.

## ಅನುದಾನವಿಲ್ಲದೆ ಪ್ರಕೃತಿ ವಿಕೋಪ ಪರಿಹಾರ ಸಾಧ್ಯವಾಗುತಿಲ್ಲ



ಮಂಗಳೂರು: ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಕೃತಿ ವಿಕೋಪದಿಂದಾಗಿರುವ ಹಾನಿ, ಕೈಗೊಂಡ ಪರಿಹಾರ ಕ್ರಮ ಸಹಿತ ಸಹಿತ ಜನಸಾಮಾನ್ಯರು ಅನುಭವಿಸುತ್ತಿರುವ ಅನೇಕ ಸಮಸ್ಯೆಗಳ ಬಗ್ಗೆ ಶಾಸಕ ವೇದವ್ಯಾಸ ಕಾಮತ್ ಪಾಲಿಕೆ ವ್ಯಾಪ್ತಿಯ ಅಧಿಕಾರಿಗಳೊಂದಿಗೆ ಶನಿವಾರ ಸಭೆ ನಡೆಸಿದರು. ಈ ಬಾರಿಯ ಪ್ರಕೃತಿ ವಿಕೋಪದಿಂದಾಗಿ ನಗರದ ಹಲವೆಡೆ ರಸ್ತೆ, ಚರಂಡಿ, ರಾಜ ಕಾಲುವೆ, ತಡೆಗೋಡೆಗಳಿಗೆ ವಿಪರೀತ ಹಾನಿಯಾಗಿದೆ. ಕಾನೂನಾತ್ಮಕವಾಗಿ ತಡೆಗೋಡೆಗೆ ಪರಿಹಾರ ಒದಗಿಸಲು ಸಾಧ್ಯವಿಲ್ಲ ದಿದ್ದರೂ ಈ ಹಿಂದೆ ಬಿಜೆಪಿ ಸರಕಾರದ ಅವಧಿಯಲ್ಲಿ 25ರಿಂದ 50 ಕೋ.ರೂ.ವರೆಗೂ ಅನುದಾನವನ್ನು ತಂದು ನಗರದಲ್ಲಿ ಪರಿಹಾರ ಕಾರ್ಯ ನಡೆಸಲಾಗಿತ್ತು. ಆದರೆ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದಾಗಿನಿಂದ ಮಂಗಳೂರು ಮಹಾನಗರ ಪಾಲಿಕೆಗೆ ವಿಶೇಷ ಅನುದಾನವನ್ನೇ ನೀಡಿಲ್ಲ. ಈ ಹಿಂದಿನ ಮಳೆ ಹಾನಿಯ ಪರಿಹಾರ ಧನವೂ ಬಂದಿಲ್ಲ. ಈ ಬಾರಿಯ ಪರಿಹಾರದ ಬಗ್ಗೆ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಕೆಯಾಗಲಿದೆ. ಅದೂ ಬಾಕಿಯಾದರೆ ಕ್ಷೇತ್ರದ ಜನತೆ ತೀವ್ರ ಸಮಸ್ಯೆ ಎದುರಿಸಬೇಕಾಗುತ್ತದೆ ಎಂದರು.

## ಮಂಗಳೂರಲ್ಲಿ ಸಂಪುಟ ಸಭೆ ನಡೆದರೆ ಅನುಕೂಲವಾಗಲಿದೆ : ಐವನ್



ಮಂಗಳೂರು : ರಾಜ್ಯ ರಾಜಧಾನಿ ಬೆಂಗಳೂರು ಹೊರತುಪಡಿಸಿ ಈಗಾಗಲೇ ಚಾಮರಾಜನಗರ, ನಂದಿಹಿಲ್ಸ್, ಕಲಬುರ್ಗಿಯಲ್ಲಿ ಈಗಾಗಲೇ ಸಚಿವ ಸಂಪುಟ ಸಭೆ ನಡೆದಿದ್ದು, ವಿಜಯಪುರದಲ್ಲಿ ಮುಂದಿನ ಸಚಿವ ಸಂಪುಟ ಸಭೆ ನಡೆಯಲಿದೆ. ಬಳಿಕ ಕರಾವಳಿ ಜಿಲ್ಲೆಗಳ ಅಭಿವೃದ್ಧಿಗೆ ಪೂರಕವಾಗಿ ಮಂಗಳೂರಿನಲ್ಲಿ ಸಚಿವ ಸಂಪುಟ ಸಭೆ ನಡೆಸಲು ರಾಜ್ಯ ಸರಕಾರಕ್ಕೆ ಬೇಡಿಕೆ ಸಲ್ಲಿಸುವುದಾಗಿ ವಿಧಾನ ಪರಿಷತ್ ಸದಸ್ಯ ಐವನ್ ಡಿಸೋಜಾ ಹೇಳಿದ್ದಾರೆ. ಮನಪಾ ಕಟ್ಟಡದಲ್ಲಿರುವ ಕಚೇರಿಯಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತಾಡಿದ ಅವರು, ಉತ್ತರ, ದಕ್ಷಿಣ ಕನ್ನಡ ಸೇರಿದಂತೆ ಕರಾವಳಿ ಜಿಲ್ಲೆಗಳ ಸಮಸ್ಯೆಗಳ ಬಗ್ಗೆ ಸಚಿವರ ಗಮನ ಸೆಳೆಯುವ ನಿಟ್ಟಿನಲ್ಲಿ ಈ ಭಾಗದಲ್ಲಿ ಸಂಪುಟ ಸಭೆ ನಡೆದರೆ ಅನುಕೂಲವಾಗಲಿದೆ ಎಂದವರು ಹೇಳಿದರು. ದ.ಕ. ಜಿಲ್ಲೆ ಸೇರಿದಂತೆ ಕರಾವಳಿಯಲ್ಲಿ ಪ್ರವಾಸೋದ್ಯಮಕ್ಕೆ ಒತ್ತು ನೀಡುವ ಬಗ್ಗೆ ಈಗಾಗಲೇ ರಾಜ್ಯ ಮಟ್ಟದಲ್ಲಿ ಸಭೆ ನಡೆದಿದೆ. ಜಿಲ್ಲೆಗಳಲ್ಲಿ ಇನ್ನೂ ಪ್ರವಾಸೋದ್ಯಮಕ್ಕೆ ಸಂಬಂಧಿಸಿ ದೊಡ್ಡ ಯೋಜನೆ ಘೋಷಣೆಯಾಗಿಲ್ಲ. ಮೀನುಗಾರಿಕೆಗೆ ಪೂರಕವಾಗಿ ಕರಾವಳಿಯಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸುವ ಅಗತ್ಯವಿದೆ ಎಂದು ಅವರು ಆಗ್ರಹಿಸಿದರು.

## ಸ್ಮಾರ್ಟ್ ಅಂಗನವಾಡಿಯಾಗಿ ಬಿಜೈ ಕೇಂದ್ರ–ಅರುಣ್‌ಪ್ರಭ ಕೆ.ಎಸ್.



ಮಂಗಳೂರು : ಸ್ಮಾರ್ಟ್ ಸಿಟಿ ಯೋಜನೆಯ ಪ್ರದೇಶ ಆಧಾರಿತ ಅಭಿವೃದ್ಧಿಯಡಿ ನಗರದ ಎಂಟು ವಾರ್ಡ್‌ಗಳ 54 ಶಾಲೆಗಳನ್ನು ಅಭಿವೃದ್ಧಿ ಪಡಿಸಲಾಗಿದೆ. ಮುಂದಿನ ದಿನಗಳಲ್ಲಿ ಬಿಜೈ ಅಂಗನವಾಡಿ ಕೇಂದ್ರವನ್ನು ಸ್ಮಾರ್ಟ್ ಅಂಗನವಾಡಿಯಾಗಿ ಅಭಿವೃದ್ಧಿ ಪಡಿಸಲು ಸಹಕರಿಸುವುದಾಗಿ ಮಂಗಳೂರು ಸ್ಮಾರ್ಟ್ ಸಿಟಿ ಯೋಜನೆಯ ಜನರಲ್ ಮ್ಯಾನೇಜರ್ ಅರುಣ್‌ಪ್ರಭ ಕೆ.ಎಸ್.ಹೇಳಿದರು. ಬಿಜೈ ಅಂಗನವಾಡಿ ಕೇಂದ್ರಕ್ಕೆ ವೈಯಕ್ತಿಕ ನೆಲೆಯಲ್ಲಿ ಎರಡು ಆಹಾರ ಸುರಕ್ಷತಾ ಬಾಕ್ಸ್ ಹಸ್ತಾಂತರಿಸಿ ಮಾತನಾಡಿದ ಅವರುಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಹಾಗೂ ದ.ಕ.ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ನೆರವಿನಿಂದ ಬಿಜೈ ಅಂಗನವಾಡಿ ಕೇಂದ್ರ ಉತ್ತಮ ಅಭಿವೃದ್ಧಿ ಕಂಡಿದೆ.

## ಕಾರ್ಮಿಕರಿಂದ ಸಾರ್ವತ್ರಿಕ ಮುಷ್ಕರ : ವಿವಿಧೆಡೆ ಪ್ರತಿಭಟನೆ




ಉಡುಪಿ : ಕೇಂದ್ರ ಸರಕಾರ ನಾಲ್ಕು ಕಾರ್ಮಿಕ ಸಂಹಿತೆಗಳ ಜಾರಿ ಮಾಡದಂತೆ ಆಗ್ರಹಿಸಿ ಅಖಿಲ ಭಾರತ ಸಾರ್ವತ್ರಿಕ ಮುಷ್ಕರದ ಹಿನ್ನೆಲೆಯಲ್ಲಿ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ (ಜೆಸಿಟಿಯು) ಉಡುಪಿ ಜಿಲ್ಲೆ ನೇತೃತ್ವದಲ್ಲಿ ಉಡುಪಿ ಜಿಲ್ಲೆಯ ವಿವಿಧ ಕಾರ್ಮಿಕರು ಬುಧವಾರ ಮುಷ್ಕರ ನಡೆಸಿದರು. ಕೇಂದ್ರ ಹಾಗೂ ರಾಜ್ಯ ಸರಕಾರದ ನೀತಿಗಳನ್ನು ವಿರೋಧಿಸಿ ಕಟ್ಟಡ, ಅಂಗನವಾಡಿ, ಬಿಸಿಯೂಟ, ಹೆಂಚು, ಬೀಡಿ, ಕೆಲವು ಫ್ಯಾಕ್ಟರಿಗಳ ಕಾರ್ಮಿಕರು, ಬ್ಯಾಂಕ್, ವಿಮಾ ಹಾಗೂ ಅಂಚೆ ನೌಕರರು ಕೆಲಸಕ್ಕೆ ಹೋಗದೆ ಮುಷ್ಕರ ನಡೆಸಿ, ಜೆಸಿಟಿಯ ನೇತೃತ್ವದಲ್ಲಿ ಉಡುಪಿ, ಕುಂದಾಪುರ ಹಾಗೂ ಬೈಂದೂರಿನಲ್ಲಿ ಹಮ್ಮಿಕೊಳ್ಳಲಾದ ಪ್ರತಿಭಟನೆಯಲ್ಲಿ ಪಾಲ್ಗೊಂಡರು. ಉಡುಪಿಯ ಹಳೆಯ ಕೆಎಸ್ಆರ್ಟಿಸಿ ಬಸ್ ನಿಲ್ದಾಣದ ಬಳಿ ಇರುವ ಸಿಐಟಿಯು ಕಚೇರಿಯಿಂದ ಪ್ರಧಾನ ಅಂಚೆ ಕಚೇರಿಯವರೆಗೆ ಕಾರ್ಮಿಕರು ಮೆರವಣಿಗೆ ನಡೆಸಿದರು.

## ಮೂಲ್ಕಿ, ಕಡಬ ತಾಲೂಕುಗಳಿಗೆ ಅಗ್ನಿಶಾಮಕ ಠಾಣೆ ಮಂಜೂರು



ಮಂಗಳೂರು: ಮುಲ್ಕಿ ಮತ್ತು ಕಡಬ ತಾಲೂಕಿಗೆ ಅಗ್ನಿಶಾಮಕ ಠಾಣೆಯನ್ನು ಮಂಜೂರುಗೊಳಿಸಿದ್ದು, ಶೀಘ್ರದಲ್ಲಿ ಇದಕ್ಕೆ ಸಂಬಂಧಿಸಿದ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ಹೇಳಿದರು. ಅವರು ಪಜೀರಿನಲ್ಲಿ ಉಳ್ಳಾಲ ತಾಲೂಕು ಅಗ್ನಿಶಾಮಕ ಠಾಣೆಯ ನೂತನ ಕಟ್ಟಡದ ಶಿಲಾನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿ, ಅಗ್ನಿಶಾಮಕ ಇಲಾಖೆಗೆ ತುರ್ತು ಸಂದರ್ಭ ನಿರ್ವಹಣೆಗೆ ರೂ.50 ಕೋಟಿ ವೆಚ್ಚದಲ್ಲಿ ಹೊಸ ವಾಹನಗಳ ಖರೀದಿಗೆ ಮಂಜೂರಾತಿ ನೀಡಲಾಗಿದೆ. 15 ವರ್ಷ ದಾಟಿದ ವಾಹನಗಳನ್ನು ಬಳಸುವಂತಿಲ್ಲ ಎಂಬ ನಿಯಮದಿಂದ ಅಗ್ನಿಶಾಮಕ ಇಲಾಖೆಯ ಹಲವು ವಾಹನಗಳು ನಿರುಪಯುಕ್ತವಾಗಿತ್ತು. ಇದರಿಂದ ಹೊಸ ವಾಹನಗಳ ಖರೀದಿಸಬೇಕಾದ ಅನಿವಾರ್ಯತೆ ಇದೆ. ಈ ನಿಟ್ಟಿನಲ್ಲಿ ಇಲಾಖೆಗೆ ಹೊಸ ಅಗ್ನಿಶಾಮಕ ವಾಹನಗಳ ಖರೀದಿಗೆ ರೂ. 50 ಕೋಟಿ ಬಿಡುಗಡೆ ಮಾಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಇಲಾಖೆಗೆ ಅತೀ ಉದ್ದದ 90ಮೀ. ಎತ್ತರದ ಏಣಿಯನ್ನು ಖರೀದಿಸಲಾಗಿದೆ. ಇದರಿಂದ ಎತ್ತರದ ಕಟ್ಟಡಗಳಲ್ಲಿ ಉಂಟಾಗುವ ದುರಂತಗಳ ಸ್ಥಳಗಳಿಗೆ ತುರ್ತಾಗಿ ತಲುಪಬಹುದಾಗಿದೆ. ಇದಲ್ಲದೆ ಆಧುನೀಕರಣ ಅಭಿವೃದ್ಧಿಯಿಂದ ಎದುರಾಗುವ ದುರಂತಗಳ ನಿರ್ವಹಣೆಗೆ ಸುಲಭವಾಗಬಹುದು ಎಂದು ಹೇಳಿದರು.

## ಎಲ್ಲಾ ಕಡೆ ಕಾನೂನು ಕಠಿಣವಾಗಿದೆ – ಡಾ. ಜಿ. ಪರಮೇಶ್ವರ್



ಸುಬ್ರಹ್ಮಣ್ಯ : ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಎಲ್ಲಾ ರೀತಿಯಲ್ಲೂ ಕಠಿಣವಾಗಿದೆ ಎಂದು ರಾಜ್ಯ ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹೇಳಿದ್ದಾರೆ. ಕುಕ್ಕೆ ಸುಬ್ರಹ್ಮಣ್ಯದಲ್ಲಿ ಮಾತನಾಡಿದ ಅವರು, "ಇತ್ತೀಚೆಗೆ ನಡೆದ ಕಾನ್ಫರೆನ್ಸ್‌ನಲ್ಲಿ ಮಾನ್ಯ ಮುಖ್ಯಮಂತ್ರಿಗಳ ಉಪಸ್ಥಿತಿಯಲ್ಲಿ, ವಿವಿಧ ಅಪರಾಧಗಳ ಬಗ್ಗೆ ಮಾಹಿತಿ ಪಡೆದ ವೇಳೆ ಕ್ರೈಮ್ ರೇಟ್ ಕಡಿಮೆಯಾಗಿರುವುದು ಕಂಡು ಬಂದಿದೆ. ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೇ ಎಲ್ಲ ಕಡೆ ಕಾನೂನುನನ್ನು ಬಹಳ ಕಠಿಣವಾಗಿ ತೆಗೆದುಕೊಳ್ಳಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲೇ ಗಮನಿಸಿದಾಗ ಕಠಿಣ ಕ್ರಮಕೈಗೊಂಡ ಹಿನ್ನೆಲೆಯಲ್ಲಿ ಇದೀಗ ಇಲ್ಲಿನ ಕಾನೂನು ಸುವ್ಯವಸ್ಥೆ ಉತ್ತಮವಾಗಿರಲು ಸಾಧ್ಯವಾಗಿದೆ". "ವಿಶೇಷ ಕಾರ್ಯಪಡೆಯ ರಚನೆಯಿಂದ ಜಿಲ್ಲೆಯ ಶಾಂತಿ – ಸುವ್ಯವಸ್ಥೆಗೆ ಪೂರಕವಾಗಿದೆ. ಈ ಬಗ್ಗೆ ಇಂದು ಹಲವರ ಬಳಿ ವಿಚಾರಿಸಿದ್ದಾಗ ಶ್ಲಾಘನೆ ವ್ಯಕ್ತವಾಗಿದೆ. ಬೆಂಗಳೂರು ಬಳಿಕ ಬೆಳೆಯುವಲ್ಲಿ ಅವಕಾಶಗಳಿರುವ ಕರಾವಳಿಯಲ್ಲಿ ಶಾಂತಿವ್ಯವಸ್ಥೆಗಳು ಅತೀ ಮುಖ್ಯ. ಇಲ್ಲಿ ಶಾಂತಿ ನೆಲೆಸಿದರೆ ಉದ್ಯಮಗಳು, ಉದ್ಯೋಗಗಳು ಸೃಷ್ಟಿಯಾಗುತ್ತದೆ. ಅದಕ್ಕಾಗಿ ಈ ಭಾಗಕ್ಕೆ ಹೆಚ್ಚು ಗಮನ ಹರಿಸುತ್ತೇವೆ. ಇಲ್ಲಿ ಒಂದೆರಡು ಜನ ಬೇರೆ ರೀತಿಯಲ್ಲಿ ಇದ್ದರೂ ಜಿಲ್ಲೆಯ ಜನ ಉತ್ತಮರಾಗಿರುವವರು" ಎಂದರು.

## ಹೆಣ್ಣುಕರುಗಳಿಗೆ ಕಂದು ರೋಗ ಲಸಿಕಾ ಕಾರ್ಯಕ್ರಮ



ಮಂಗಳೂರು: ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ 4 ನೇ ಸುತ್ತಿನ ಮೊದಲನೇ ಹಂತದ ಕಂದು ರೋಗ ಲಸಿಕಾ ಕಾರ್ಯಕ್ರಮವು ಮೂಲಕ ಜುಲೈ 10 ರಿಂದ ಪ್ರಾರಂಭವಾಗಲಿದ್ದು, ಜುಲೈ 31 ರವರೆಗೆ ಜಿಲ್ಲೆಯಾದ್ಯಂತ ದನ ಮತ್ತು ಎಮ್ಮೆಗಳ ಹೆಣ್ಣುಕರುಗಳಿಗೆ ಮಾತ್ರ ಉಚಿತವಾಗಿ ಕಂದು ರೋಗ (ಬ್ರುಸೆಲ್ಲೋಸಿಸ್) ವಿರುದ್ಧ ಲಸಿಕೆಯನ್ನು ನೀಡಲಾಗುತ್ತದೆ. ಲಸಿಕೆಯನ್ನು ಕರುಗಳಿಗೆ ಜೀವಿತಾವಧಿಯಲ್ಲಿ ಒಮ್ಮೆ ಮಾತ್ರ ನೀಡಬೇಕು. ಕಂದು ರೋಗವು ಬ್ಯಾಕ್ಟೀರಿಯಾದಿಂದ ಹರಡುವ ರೋಗವಾಗಿದ್ದು ಜಾನುವಾರುಗಳಲ್ಲಿ ಜ್ವರ, ಗರ್ಭಪಾತ, ಗರ್ಭಧಾರಣೆ ಸಮಸ್ಯೆಗಳನ್ನು ಉಂಟುಮಾಡುತ್ತದೆ. ಇದು ಪ್ರಾಣಿಜನ್ಯ ರೋಗವಾಗಿದ್ದು, ಮನುಷ್ಯರಿಗೂ ಹರಡಬಹುದು. ಇದರ ಚಿಕಿತ್ಸೆ ದುಬಾರಿ ಮತ್ತು ತ್ರಾಸದಾಯಕವಾಗಿದ್ದು, ಒಟ್ಟಾರೆ ರೈತರಿಗೆ ತುಂಬಾ ಆರ್ಥಿಕ ನಷ್ಟ ಉಂಟುಮಾಡುತ್ತದೆ. ಆದ್ದರಿಂದ ರೈತ ಬಾಂಧವರು ತಮ್ಮ ಹತ್ತಿರದ ಪಶುವೈದ್ಯಕೀಯ ಸಂಸ್ಥೆಗಳನ್ನು ಸಂಪರ್ಕಿಸಿ, ತಮ್ಮ 4ರಿಂದ 8ತಿಂಗಳ ವಯಸ್ಸಿನ ಹೆಣ್ಣುಕರುಗಳಿಗೆ ತಪ್ಪದೇ ಲಸಿಕೆ ಹಾಕಿಸಬೇಕೆಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ. ಎಂ.ಎನ್. ರಾಜೇಂದ್ರ ಕುಮಾರ್‌ಗೆ ಅಭಿನಂದನೆ



ಮಂಗಳೂರು: ನವೋದಯ ಗ್ರಾಮ ವಿಕಾಸ ಚಾರಿಟೆಬಲ್ ಟ್ರಸ್ಟ್ ಪ್ರಾಯೋಜಿತ ನವೋದಯ ಸ್ವಸಹಾಯ ಸಂಘಗಳ ರಜತ ಸಂಭ್ರಮವನ್ನು ಯಶಸ್ವಿಯಾಗಿ ಸಂಘಟಿಸಿದ ಸಹಕಾರ ರತ್ನ ಡಾ. ಎಂ. ಎನ್. ರಾಜೇಂದ್ರ ಕುಮಾರ್ ಅವರನ್ನು ಮಂಗಳೂರಿನ ಲೆಕ್ಕಪರಿಶೋಧಕರಾದ ಸಿಎ ನರೇಂದ್ರ ಪೈ ಪಿ, ಅವರು ತಮ್ಮ ಬಳಗದೊಂದಿಗೆ ಸೋಮವಾರ ಎಸ್‌ಸಿಡಿಸಿಸಿ ಬ್ಯಾಂಕ್‌ನಲ್ಲಿ ಅಭಿನಂದಿಸಿದರು. ಸಹಕಾರ ಕ್ಷೇತ್ರದಲ್ಲಿ ಅಗ್ರಮಾನ್ಯ ನಾಯಕರಾಗಿ ರಾಜ್ಯ ರಾಷ್ಟ್ರ ಮಟ್ಟದಲ್ಲಿ ಗುರುತಿಸಿಕೊಂಡಿರುವ ಡಾ. ಎಂ. ಎನ್. ರಾಜೇಂದ್ರ ಕುಮಾರ್ ಅವರು ನವೋದಯ ಸ್ವಸಹಾಯ ಸಂಘಗಳಿಗೆ ಭದ್ರ ನೆಲೆಯನ್ನು ತಂದುಕೊಟ್ಟವರು. ಅದರಲ್ಲೂ ಮಹಿಳಾ ಸಬಲೀಕರಣಕ್ಕೆ ವಿಶೇಷ ಕೊಡುಗೆಯನ್ನು ನೀಡಿದ್ದಾರೆ. ಅವರ ಈ ಪ್ರಾಮಾಣಿಕ ಹಾಗೂ ನಿಸ್ವಾರ್ಥ ಸೇವೆ ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ಬ್ಯಾಂಕ್‌ನ ನಿರ್ದೇಶಕರುಗಳಾದ ಐಕಳ ಬಾವ ದೇವಿಪ್ರಸಾದ್ ಶೆಟ್ಟಿ ಬೆಳಪು, ಶಶಿಕುಮಾರ್ ಬಾಲ್ಯೊಟ್ಟು, ಬಜಪೆ ವ್ಯವಸಾಯ ಸೇವಾ ಸಹಕಾರ ಸಂಘದ ನಿರ್ದೇಶಕ ರತ್ನಾಕರ ಶೆಟ್ಟಿ, ಉದ್ಯಮಿ ಜಯಪ್ರಕಾಶ್ ತುಂಬೆ, ಸಿ.ಎ. ನರಸಿಂಹ ಕಾಮತ್, ಶಿರಾಲ್ ಎಸ್. ರೈ ಮೊದಲಾದವರು ಉಪಸ್ಥಿತರಿದ್ದರು.

## ದ.ಕ. ಜಿಲ್ಲೆಗೆ ಮರುನಾಮಕರಣ ಮಾಡಲು ಮನವಿ




ಮಂಗಳೂರು: 1931ರಲ್ಲಿ ಎಸ್.ಯು. ಪಣಿಯಾಡಿಯವರು ದ.ಕ. ಜಿಲ್ಲೆಗೆ ತುಳುನಾಡು ಜಿಲ್ಲೆ ಎಂಬ ಹೆಸರಿಡಬೇಕೆಂದು ಜಿಲ್ಲಾ ಪರಿಷತ್‌ನಲ್ಲಿ ಮಂಡಿಸಿದಾಗ ಜಿಲ್ಲೆಗೆ 'ಮಂಗಳೂರು' ಎಂದು ಹೆಸರಿಡಬೇಕೆಂಬ ಕೂಗು ಅಲ್ಲಿನ ಪರಿಷತ್ ಸದಸ್ಯರಿಂದ ಬಂದಿತ್ತು ಎಂದು ದಯಾನಂದ ಕತ್ತಲ್‌ಸಾರ್ ತಿಳಿಸಿದ್ದಾರೆ. ಅವರು ನಗರದ ಖಾಸಗಿ ಹೊಟೇಲಿನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸುಮಾರು 2000 ವರ್ಷಗಳಿಂದ ದಾಖಲಾತ್ಮಕ ಇತಿಹಾಸವಿರುವ ನಮ್ಮ ಜಿಲ್ಲೆಗೆ ಇತಿಹಾಸದ ವಿವಿಧ ಕಾಲಘಟ್ಟಗಳಲ್ಲಿ ಬೇರೆ ಬೇರೆ ಹೆಸರುಗಳಿದ್ದವು. ಸಾರ್ವತ್ರಿಕವಾಗಿ ತುಳುನಾಡು ಎಂದು ಈಗಿನ ದ.ಕ., ಉಡುಪಿ ಹಾಗೂ ಕಾಸರಗೋಡನ್ನು ಒಳಗೊಂಡ ಭೂಭಾಗಕ್ಕೆ ರಾಜಕೀಯ ಮತ್ತು ಸಾಂಸ್ಕೃತಿಕ ನೆಲಗಟ್ಟಿನಲ್ಲಿ ಹೆಸರು ಇತ್ತು.

# ಸುದ್ದಿ ತುಣುಕು

ಕೆಐಎಡಿಬಿ ಅಭಿವೃದ್ಧಿಪಡಿಸಿದ ಕೈಗಾರಿಕಾ ಪ್ರದೇಶದಲ್ಲಿನ ಕೈಗಾರಿಕೆಗಳಿಗೆ ತೆರಿಗೆ ವಿಧಿಸಲು ಗ್ರಾಮ ಪಂಚಾಯಿತಿಗೆ ಅಧಿಕಾರವಿಲ್ಲ ಎಂದು ಹೈಕೋರ್ಟ್ ಹೇಳಿದೆ.

ರಾಜ್ಯದಲ್ಲಿ ಮತ್ತೆ 5 ಜನೌಷಧ ಕೇಂದ್ರಗಳ ಸ್ಥಗಿತಕ್ಕೆ ಹೊರಡಿಸಿದ್ದ ಸರ್ಕಾರದ ಆದೇಶಕ್ಕೆ ಉಚ್ಚ ನ್ಯಾಯಾಲಯವು ತಡೆ ನೀಡಿದೆ.

ಪಕ್ಷ ಎಂದಮೇಲೆ ಭಿನ್ನಾಭಿಪ್ರಾಯಗಳು ಇರುತ್ತವೆ. ಅವುಗಳನ್ನು ಎಲ್ಲಿ ಸರಿಪಡಿಸಬೇಕೋ ಅಲ್ಲಿ ಸರಿಪಡಿಸುತ್ತೇವೆ ಎಂದು ರಾಜ್ಯ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೇವಾಲ ಹೇಳಿದ್ದಾರೆ.

"ದಕ್ಷಿಣ ಜೈನಕಾಶಿ ಶ್ರವಣಬೆಳಗೊಳವನ್ನು ಶೀಘ್ರದಲ್ಲಿಯೇ ವಿಶ್ವ ಪಾರಂಪರಿಕ ಪಟ್ಟಿಗೆ ಸೇರಿಸಲಾಗುವುದು" ಎಂದು ಕಾನೂನು ಸಂಸದೀಯ ಹಾಗೂ ಪ್ರವಾಸೋದ್ಯಮ ಸಚಿವ ಪಾಟೀಲ್ ಹೇಳಿದರು.

ಯುವತಿ ಮೇಲೆ ಅತ್ಯಾಚಾರ ಎಸಗಿದ ಆರೋಪದಲ್ಲಿ ದಾಖಲಾಗಿರುವ ಎಸ್‌ಆರ್ ರದ್ದು ಕೋರಿ ನಟ ಮಡೆನೂರು ಮನು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

SCSP-TSP ಯೋಜನೆಗಳನ್ನು ಜಾರಿ ಮಾಡಿ, ಇಲ್ಲವೇ ಪ್ರಕರಣಗಳನ್ನು ಎದುರಿಸಿ ಎಂದು ಇಂದು ಸಂಜೆ ವಿಧಾನಸೌಧದಲ್ಲಿ ನಡೆದ ಸಭೆಯಲ್ಲಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಬಿಜೆಪಿ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದ ಸಚಿವ ಪ್ರಿಯಾಂಕ್ ಖರ್ಗೆ, ಐ ಲವ್ ಯೂ, ಯು ಮಸ್ಟ್ ಲವ್ ಮೀ ಅಂತಾರಲ್ಲ ಹಂಗಾಗಿದೆ ಅವರ ಕತೆ ಎಂದು ವ್ಯಂಗ್ಯವಾಡಿದರು.

10 ದಿನಗಳ ಯುಎಸ್ ರೋಡ್ ಶೋದಿಂದ ರಾಜ್ಯಕ್ಕೆ 5500 ಕೋಟಿ ರೂ. ಬಂಡವಾಳ ಹೂಡಿಕೆ ಬಂದಿದ್ದು, ಶೀಘ್ರವೇ 'ಯೆಸ್ ಬೆಂಗಳೂರು' ಕಾರ್ಯಕ್ರಮ ಆರಂಭ ಮಾಡುವುದಾಗಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಉದ್ದೇಶಪೂರ್ವಕವಾಗಿ ನ್ಯಾಯಾಲಯದ ಆದೇಶವನ್ನು ಉಲ್ಲಂಘಿಸಿ ಲಾಭ ಪಡೆಯುವವರು ಕ್ಷಮಾಪಣೆಗೆ ಅರ್ಹರಲ್ಲ ಎಂದು ಹೈಕೋರ್ಟ್ ಹೇಳಿದೆ.

ಅಕ್ರಮ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಕರ್ನಾಟಕ ಗೃಹ ಮಂಡಳಿ (ಕೆಹೆಚ್‌ಬಿ) ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ಸೇರಿದಂತೆ ಇಬ್ಬರಿಗೆ ಸಂಬಂಧಿಸಿದ ಸ್ಥಳಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಬೆಂಗಳೂರು ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ತನಿಖಾ ವರದಿಯನ್ನು ಬಹಿರಂಗ ಪಡಿಸುವಂತೆ ಸರ್ಕಾರಕ್ಕೆ ನಿರ್ದೇಶಿಸಿದೆ.

ಯಡಿಯೂರಪ್ಪ ಪಕ್ಷ ಬಿಟ್ಟು ಹೋದವರು, ಮತ್ಯಾಕೆ ಬಂದರೋ ಗೊತ್ತಿಲ್ಲ. ಅಲ್ಲದೆ ಕಾಂಗ್ರೆಸ್, ಜೆಡಿಎಸ್ ಪಕ್ಷದ ಮನೆ ಬಾಗಿಲು ಬಡಿದಿದ್ದರು ಎಂದು ಮಾಜಿ ಸಚಿವ ಅರವಿಂದ್ ಲಿಂಬಾವಳಿ ವಾಗ್ದಾಳಿ ನಡೆಸಿದರು.

ಏಷ್ಯಾದ ಅತಿ ಹಿರಿಯ ಆನೆ ಎಂದೇ ಹೆಸರಾಗಿದ್ದ, ಮಧ್ಯಪ್ರದೇಶದ ಪನ್ನಾ ಅಭಯಾರಣ್ಯದಲ್ಲಿ ವಾಸಿಸುತ್ತಿದ್ದ ವತ್ಸಲಾ ಕೊನೆಯುಸಿರೆಳೆದಿದ್ದಾಳೆ.

26/11 ಮುಂಬೈ ದಾಳಿಯ ಸಂಚುಕೋರ ತಹವ್ವುರ್ ರಾಣಾನ ನ್ಯಾಯಾಂಗ ಬಂಧನದ ಅವಧಿಯನ್ನು ಮುಂಬೈನ ವಿಶೇಷ ನ್ಯಾಯಾಲಯ ವಿಸ್ತರಿಸಿದೆ.

12 ಮಂದಿ ನಕ್ಸಲರು ಛತ್ತೀಸ್ ಗಢ ದಂತೇವಾಡದ ಜಿಲ್ಲೆಯಲ್ಲಿ ಲೀಸರಿಗೆ ಶರಣಾಗಿದ್ದಾರೆ. ಇದರೊಂದಿಗೆ ಜಿಲ್ಲೆಯಲ್ಲಿ ಇದುವರೆಗೆ 1,005 ನಕ್ಸಲರು ಶರಣಾದಂತಾಗಿದೆ.

ಹತ್ಯೆ ಆರೋಪದಲ್ಲಿ ಸಿಲುಕಿರುವ ಕೇರಳ ನರ್ಸ್ ನಿಮಿಷಾ ಅವರನ್ನು ಗಲ್ಲಿಗೇರಿಸಲು ಯೆಮೆನ್ ಸರ್ಕಾರ ದಿನಾಂಕ ಪ್ರಕಟಿಸಿದೆ.

ನಾನು ರಾಜಕೀಯದಿಂದ ನಿವೃತ್ತಿ ಹೊಂದಿದ ಬಳಿಕ ವೇದಗಳು ಮತ್ತು ಉಪನಿಷತ್ತುಗಳ ಅಧ್ಯಯನದ ಜೊತೆಗೆ ನೈಸರ್ಗಿಕ ಕೃಷಿಯಲ್ಲಿ ತೊಡಗಿಸಿಕೊಳ್ಳುವ – ಅಮಿತ್ ಶಾ

# ಜೀರಿಗೆ ರಸಂ



**ಬೇಕಾಗುವ ಪದಾರ್ಥಗಳು :**

ಜೀರಿಗೆ – 1/4 ಕಪ್
ಕಾಳು ಮೆಣಸು – 1/4 ಕಪ್
ಕೊತ್ತಂಬರಿ – 1 1/2ಕಪ್
ತೊಗರಿಬೇಳೆ – 2 ಚಮಚ
ಬ್ಯಾಡಗಿ ಮೆಣಸಿನಕಾಯಿ – 2
ಕರಿಬೇವು – 2–5 ಎಲೆ
ಇಂಗು – ಸ್ವಲ್ಪ
ಹುಣಸೆ ರಸ – 1/4 ಕಪ್
ಉಪ್ಪು – ರುಚಿಗೆ ತಕ್ಕಷ್ಟು

**ಮಾಡುವ ವಿಧಾನ :**

ಮೊದಲಿಗೆ ಎಲ್ಲ ಸಾಮಗ್ರಿಗಳನ್ನೂ ಬೇರೆ ಬೇರೆಯಾಗಿ ಮಂದ ಉರಿಯಲ್ಲಿ ಘಮ್ ಎನ್ನುವವರೆಗೂ ಹುರಿದಿಟ್ಟುಕೊಳ್ಳಬೇಕು. ಅದು ಆರಿದ ಮೇಲೆ ನುಣ್ಣಗೆ ಪುಡಿ ಮಾಡಿ. ಒಂದು ಪಾತ್ರೆಯಲ್ಲಿ ಒಂದು ಲೋಟ ನೀರಿನ ಅಳತೆಗೆ ಒಂದು ಚಮಚದಷ್ಟು ಜೀರಿಗೆ ಮೆಣಸಿನ ರಸಂ ಪುಡಿ ಹಾಕಿ, ರುಚಿಗೆ ತಕ್ಕಷ್ಟು ಉಪ್ಪು ಹಾಕಿ, ಸ್ವಲ್ಪ ಹುಣಸೆ ರಸ ಸೇರಿಸಿ ಕುದಿಸಿದರೆ ರುಚಿಯಾದ ಮತ್ತು ಆರೋಗ್ಯಕರ ಜೀರಿಗೆ ರಸಂ ಸವಿಯಲು ಸಿದ್ಧ.

# ತಾಮ್ರ ಔಷಧದ ಮೇಲೆ ವಿಶೇಷ ಸುಂಕ ವಿಧಿಸಿದ ಟ್ರಂಪ್



ವಾಷಿಂಗ್ಟನ್: ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಡಜನ್ ಗಟ್ಟಲೇ ಆರ್ಥಿಕತೆಗಳ ಮೇಲೆ ಜಾರಿಗೆ ಬರಲು ಹೆಚ್ಚಿನ ಅಮೆರಿಕ ಸುಂಕಗಳಿಗೆ ಆಗಸ್ಟ್ 1ರ ಗಡುವು ವಿಸ್ತರಿಸುವುದಿಲ್ಲ ಎಂದು ಹೇಳಿದ್ದಾರೆ. ಆದರೆ, ತಾಮ್ರದ ಆಮದಿನ ಮೇಲೆ ಪ್ರತ್ಯೇಕ ಶೇ 50 ಪ್ರತಿಶತ ಸುಂಕದ ಯೋಜನೆಯನ್ನು ಅಮೆರಿಕ ಅಧ್ಯಕ್ಷರು ಘೋಷಿಸಿದ್ದಾರೆ. ತಾಮ್ರದ ಸುಂಕವು ಟ್ರಂಪ್ ಶ್ವೇತಭವನಕ್ಕೆ ಹಿಂದಿರುಗಿದ ಬಳಿಕ ತೆಗೆದುಕೊಂಡ ನಿರ್ಧಾರವಾಗಿದೆ. ಅವರ ಈ ತೀರ್ಮಾನವು ಲೋಹದ ಬೆಲೆಗಳನ್ನು ಗಗನಕ್ಕೇರಿಸಿದೆ.

# BRICSಗೆ ಹೊಸ ರೂಪ ನೀಡುತ್ತೇವೆ : ಪ್ರಧಾನಿ ಮೋದಿ

ಬ್ರೆಜಿಲ್: ಮುಂದಿನ ವರ್ಷ ತಮ್ಮ ಅಧ್ಯಕ್ಷತೆಯಲ್ಲಿ ಭಾರತವು ಬ್ರಿಕ್ಸ್ ಅನ್ನು "ಹೊಸ ರೂಪದಲ್ಲಿ" ಪ್ರಸ್ತುತಪಡಿಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಬ್ರೆಜಿಲ್, ರಷ್ಯಾ, ಭಾರತ, ಚೀನಾ ಮತ್ತು ದಕ್ಷಿಣ ಆಫ್ರಿಕಾಗಳನ್ನು ಒಳಗೊಂಡಿರುವ BRICSನ ಸಂಕ್ಷಿಪ್ತ ರೂಪವನ್ನು 'ಸಹಕಾರ ಮತ್ತು ಸುಸ್ಥಿರತೆಗಾಗಿ ಸ್ಥಿತಿಸ್ಥಾಪಕತ್ವ ಮತ್ತು ನಾವೀನ್ಯತೆಯ ನಿರ್ಮಾಣ ಎಂದು ಮರು ವ್ಯಾಖ್ಯಾನಿಸಲಾಗುತ್ತದೆ



ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

# ಅವಲೋಕಿತೇಶ್ವರನ ಆಶೀರ್ವಾದ ನನ್ನೊಂದಿಗಿದೆ : ದಲೈ ಲಾಮ



ಹಿಮಾಚಲ ಪ್ರದೇಶ : ಅವಲೋಕಿತೇಶ್ವರನ ಆಶೀರ್ವಾದ ನನ್ನೊಂದಿಗಿದ್ದು, ಇನ್ನೂ ದಶಕಗಳ ಕಾಲ ಬದುಕುವ ಕನಸು ಕಂಡಿದ್ದೇನೆ ಎಂದು ಟಿಬೆಟಿಯನ್ ಧರ್ಮಗುರು ದಲೈ ಲಾಮಾ ಅವರು ಹೇಳಿದರು. ಮೆಕ್ಲಿಯೋಡ್‌ಗಂಜ್‌ನ ಪ್ರಮುಖ ದಲೈ ಲಾಮಾ ದೇವಾಲಯವಾದ ತ್ಸುಗ್ಲಾಗ್‌ಖಾಂಗ್‌ನಲ್ಲಿ ಭಾನುವಾರ ತಮ್ಮ 90ನೇ ಜನ್ಮದಿನದ ಸಂಭ್ರಮ ನಡೆಯಲಿದ್ದು, ಇದಕ್ಕೂ ಮುನ್ನ ನಡೆದ ದೀರ್ಘಾಯುಷ್ಯ ಪ್ರಾರ್ಥನಾ ಸಮಾರಂಭದಲ್ಲಿ ಅವರು ಮಾತನಾಡಿದರು. 'ಹಲವು ಭವಿಷ್ಯವಾಣಿಗಳನ್ನು ನೋಡುವಾಗ, ನನಗೆ ಅವಲೋಕಿತೇಶ್ವರನ ಆಶೀರ್ವಾದವಿದೆ' ಎಂದು ಅನಿಸುತ್ತದೆ ಎಂದರು.

# ಉದ್ಯಮಿ ಎಲಾನ್ ಮಸ್ಕ್‌ನಿಂದ "ಅಮೆರಿಕ ಪಾರ್ಟಿ"

ಅಮೆರಿಕ : ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮಾಜಿ ಬೆಂಬಲಿಗ ಉದ್ಯಮಿ ಎಲಾನ್ ಮಸ್ಕ್ ಹೊಸ ರಾಜಕೀಯ ಪಕ್ಷವನ್ನು ಘೋಷಿಸಿದ್ದಾರೆ. "ನಿಮ್ಮ ಸ್ವಾತಂತ್ರ್ಯವನ್ನು ಮರಳಿ ನಿಮಗೆ ನೀಡುವ ಉದ್ದೇಶದಿಂದ ಅಮೆರಿಕ ಪಾರ್ಟಿಯನ್ನು ಸ್ಥಾಪಿಸಲಾಗಿದೆ. ನಿಮಗೆ ಹೊಸ ರಾಜಕೀಯ ಪಕ್ಷ ಅಗತ್ಯವಿದೆ. ಖಂಡಿತ ಅದು ಆಗುತ್ತದೆ. ನಮ್ಮ ದೇಶವನ್ನು ವ್ಯರ್ಥ ಮತ್ತು ಭ್ರಷ್ಟಾಚಾರದಿಂದ ದಿವಾಳಿ ಮಾಡುತ್ತಿರುವುದನ್ನು ಗಮನಿಸಿದರೆ, ನಾವು ಪ್ರಜಾಪ್ರಭು




ತ್ವದಲ್ಲಿ ಅಲ್ಲ, ಏಕಪಕ್ಷ ಆಡಳಿತ ವ್ಯವಸ್ಥೆಯಲ್ಲಿದ್ದೇವೆ ಎಂದನಿಸುತ್ತದೆ ಎಂದು ಎಕ್ಸ್ ಪೋಸ್ಟ್‌ನಲ್ಲಿ ಎಲಾನ್ ಮಸ್ಕ್ ಪ್ರಕಟಿಸಿದ್ದಾರೆ.

# ಭಯೋತ್ಪಾದಕರ ವಿರುದ್ಧ ನಿರ್ಬಂಧ ಹೇರಲು ಹಿಂಜರಿಕೆ ಇರಬಾರದು



ಬ್ರೆಜಿಲ್: ಭಯೋತ್ಪಾದಕರ ವಿರುದ್ಧ ನಿರ್ಬಂಧಗಳನ್ನು ವಿಧಿಸುವಲ್ಲಿ ಯಾವುದೇ ಹಿಂಜರಿಕೆ ಇರಬಾರದು ಮತ್ತು ಭಯೋತ್ಪಾದನೆಯಲ್ಲಿ ನಲುಗಿದವರು ಮತ್ತು ಅದರ ಬೆಂಬಲಿಗರನ್ನು ಒಂದೇ ತಕ್ಕಡಿಯಲ್ಲಿ ತೂಗಲು ಸಾಧ್ಯವಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಬ್ರಿಕ್ಸ್ ಶೃಂಗಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಈ ಪ್ರತಿಪಾದನೆ ಮಾಡಿದ್ದಾರೆ. ಜಾಗತಿಕ ಭಯೋತ್ಪಾದನೆಯ ಈ ಬೆದರಿಕೆಯನ್ನು ಎದುರಿಸಲು ಒಗ್ಗಟ್ಟಿನ ಪ್ರಯತ್ನಗಳಿಗೆ ಅವರು ಈ ಸಂದರ್ಭದಲ್ಲಿ ಕರೆ ನೀಡಿದ್ದಾರೆ. ಏಪ್ರಿಲ್ 22ರ ದಾಳಿಯು ಭಾರತಕ್ಕೆ ಮಾತ್ರವಲ್ಲ, ಇಡೀ ಮಾನವೀಯತೆಗೆ ಹೊಡೆತ ಎಂದು ಕಳವಳ ವ್ಯಕ್ತಪಡಿಸಿದರು.

# ಇಂಗ್ಲೆಂಡ್‌ಗೆ ಸೋಲುಣಿಸಿದ ಭಾರತ ಟೆಸ್ಟ್ ತಂಡ

ಬರ್ಮಿಂಗ್ ಹ್ಯಾಮ್ : ಇಲ್ಲಿನ ಕ್ರೀಡಾಂಗಣದಲ್ಲಿ ಟೀಮ್ ಇಂಡಿಯಾ ಅಮೋಘ ಪ್ರದರ್ಶನ ನೀಡಿದ್ದು, ಎರಡನೇ ಟೆಸ್ಟ್ ಪಂದ್ಯದಲ್ಲಿ 336 ರನ್ ಗಳ ಭರ್ಜರಿ ಜಯ ಸಾಧಿಸಿದೆ. 608 ರನ್‌ಗಳ ಸವಾಲಿನ ಮೊತ್ತವನ್ನು ಕಲೆ ಹಾಕುವಲ್ಲಿ ವಿಫಲವಾದ ಇಂಗ್ಲೆಂಡ್ ಆಕಾಶದೀಪ್ ಅವರ ಮಾರಕ ದಾಳಿಯಿಂದ ನಿರಾಸೆ ಅನುಭವಿಸಿದೆ. ಈ ಮೂಲಕ ಭಾರತ ಆಂಡರ್ಸನ್, ತೆಂಡೂಲ್ಕರ್ ಸರಣಿಯಲ್ಲಿ 1–1 ಸಮಬಲ ಸಾಧಿಸಿದೆ.ಈ ಮೊದಲು ಲೀಡ್ಸ್



ನಲ್ಲಿ ನಡೆದಿದ್ದ ಮೊದಲ ಟೆಸ್ಟ್ ಪಂದ್ಯವನ್ನು ಇಂಗ್ಲೆಂಡ್ 5 ವಿಕೆಟ್‌ಗಳಿಂದ ಗೆದ್ದು ಬೀಗಿತ್ತು.

# ಭಾರತ ಫುಟ್‌ಬಾಲ್ ತಂಡಕ್ಕೆ ನೂತನ ಕೋಚ್!

ನವದೆಹಲಿ: ಭಾರತ ಫುಟ್‌ಬಾಲ್ ತಂಡದ ನೂತನ ಮುಖ್ಯ ಕೋಚ್ ನೇಮಕ ಪ್ರಕ್ರಿಯೆ ಆರಂಭವಾಗಿದೆ. ಮುಖ್ಯ ಕೋಚ್ ನೇಮಕ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ. ಸೀನಿಯರ್ ಹಂತದ ರಾಷ್ಟ್ರೀಯ ಫುಟ್‌ಬಾಲ್ ತಂಡಗಳಿಗೆ ಕೋಚ್ ಆಗಿ ಕನಿಷ್ಠ 10 ವರ್ಷ ಕಾರ್ಯ ನಿರ್ವಹಿಸಿದ ಅನುಭವವನ್ನು ಮೂಲ ಅರ್ಹತೆಯಾಗಿ ನಿಗದಿಪಡಿಸಲಾಗಿದೆ. ಕೋಚ್ ಆಗ ಬಯಸುವವರು ಸಾಂಸ್ಕೃತಿಕ ಸೂಕ್ಷ್ಮತೆಯನ್ನೂ ಹೊಂದಿರಬೇಕು ಎಂದು ಭಾರತ ಫುಟ್‌ಬಾಲ್ ಫೆಡರೇಷನ್ (ಎಐಎಫ್‌ಎಫ್) ತಿಳಿಸಿದೆ. ಅರ್ಜಿ ಸಲ್ಲಿಕೆಗೆ ಜುಲೈ 13 ಕೊನೆಯ ದಿನ.

# ನೀರಜ್ ಚೋಪ್ರಾಗೆ ಅಗ್ರಸ್ಥಾನ

ಬೆಂಗಳೂರು: ವರ್ಲ್ಡ್ ಅಥ್ಲೆಟಿಕ್ಸ್‌ನಿಂದ ಅನುಮೋದಿತ ಚೊಚ್ಚಲ ಆವೃತ್ತಿಯ ಎನ್‌ಸಿ ಕ್ಲಾಸಿಕ್ ಪಂದ್ಯಾವಳಿಯಲ್ಲಿ ಭಾರತೀಯ ಜಾವೆಲಿನ್ ತಾರೆ ನೀರಜ್ ಚೋಪ್ರಾ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ. 86.18 ಮೀಟರ್ ದೂರ ಎಸೆಯುವ ಮೂಲಕ ನೀರಜ್ ಚೋಪ್ರಾ ಅಗ್ರಸ್ಥಾನ ಗಳಿಸಿದರು. ತಮ್ಮ ಹೆಸರಿನಲ್ಲೇ ಅಂತಾರಾಷ್ಟ್ರೀಯ ಅಥ್ಲೆಟಿಕ್ಸ್ ಸ್ಪರ್ಧೆಯನ್ನು ಆಯೋಜಿಸಿ, ಅದರಲ್ಲಿಯೇ



ಗೆದ್ದ ಮೊದಲ ಭಾರತೀಯ ಕ್ರೀಡಾಪಟು ಎಂಬ ಹಿರಿಮೆಗೂ ಪಾತ್ರರಾದರು.

# ದ್ವಿಭಾಷಾ ನೀತಿ ವಿಚಾರದಲ್ಲಿ ಮುಖ್ಯಮಂತ್ರಿಗಳ ಅಪ್ಪಣೆ ಪಡೆದು ತೀರ್ಮಾನ



ಬೆಳಗಾವಿ: 'ರಾಜ್ಯದ ಮಕ್ಕಳ ಹಿತ ಮತ್ತು ಭವಿಷ್ಯದ ದೃಷ್ಟಿಯಿಂದ ದ್ವಿಭಾಷಾ ನೀತಿ ವಿಚಾರದಲ್ಲಿ ಮುಖ್ಯಮಂತ್ರಿಗಳ ಅಪ್ಪಣೆ ಪಡೆದು ತೀರ್ಮಾನ ಕೈಗೊಳ್ಳುತ್ತೇವೆ" ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ತಿಳಿಸಿದರು. ದ್ವಿಭಾಷಾ ನೀತಿ ಜಾರಿ ಸಂಬಂಧ ಈಗಾಗಲೇ ಮುಖ್ಯಮಂತ್ರಿಗಳು ಅಲ್ಲಲ್ಲಿ ಪ್ರತಿಕ್ರಿಯೆ ನೀಡಿದ್ದಾರೆ. ಈ ಬಗ್ಗೆ ನಾನು ಒಬ್ಬನೇ ತೀರ್ಮಾನ ತೆಗೆದುಕೊಳ್ಳಲು ಬರುವುದಿಲ್ಲ. ಮುಖ್ಯ ಮಂತ್ರಿಗಳ ಮಟ್ಟದಲ್ಲಿ ಅಂತಿಮ ತೀರ್ಮಾನ ಆಗಬೇಕಿದೆ. ಮಕ್ಕಳಿಗೆ ಈವಾಗಿನ ಅವಶ್ಯಕತೆ ಮತ್ತು ಭವಿಷ್ಯದ ದೃಷ್ಟಿಯಿಂದ ತೀರ್ಮಾನ ತೆಗೆದುಕೊಳ್ಳುತ್ತೇವೆ" ಎಂದು ಸ್ಪಷ್ಟಪಡಿಸಿದರು.

# ಮಂಜೂರಾಗಿದ್ದ ಆಸ್ಪತ್ರೆಗಳನ್ನು ಸಚಿವ ತಂಗಡಗಿ ರದ್ದು ಮಾಡಿಸಿದ್ದಾರೆ : ರೆಡ್ಡಿ

ಕೊಪ್ಪಳ : ತಮ್ಮ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ವೆಂಕಟಗಿರಿ ಹಾಗೂ ಇರಕಲ್ ಗಡಾ ಹೋಬಳಿಗೆ ಮಂಜೂರಾಗಿದ್ದ ತಲಾ 30 ಹಾಸಿಗೆಗಳ ಎರಡು ಸಮುದಾಯ ಆಸ್ಪತ್ರೆಗಳನ್ನು ಸಚಿವ ಶಿವರಾಜ ತಂಗಡಗಿ ರದ್ದು ಮಾಡಿಸಿದ್ದಾರೆ. ಇದು ಸಚಿವ 'ತಂಗಡಗಿ ಅಭಿವೃದ್ಧಿ ಮಾದರಿ' ಎಂದು ಶಾಸಕ ಗಾಲಿ ಜನಾರ್ದನ್ ರೆಡ್ಡಿ



ಅವರು ವಾಗ್ದಾಳಿ ನಡೆಸಿದರು. ನಗರದ ತಾ. ಪಂ. ಮಂಥನ ಸಭಾಂಗಣದಲ್ಲಿ ನಡೆದ ವಿವಿಧ ಇಲಾಖೆಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ (ಕೆಡಿಪಿ) ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗಂಗಾವತಿ ವಿಧಾನಸಭಾ ಕ್ಷೇತ್ರಕ್ಕೆ ಸಚಿವ ತಂಗಡಗಿ ಅಸಹಕಾರದ ತೋರುತ್ತಿದ್ದಾರೆ ಎಂದು ಬಗ್ಗೆ ಕಿಡಿಕಾರಿದರು.

# ಗಂಡು ಮಕ್ಕಳಿಗೂ ಬಸ್‌ನಲ್ಲಿ ಉಚಿತ ಪ್ರಯಾಣ !

ಕೊಪ್ಪಳ : ಸದ್ಯ ರಾಜ್ಯದಲ್ಲಿ ಶಕ್ತಿ ಯೋಜನೆ ಅಡಿಯಲ್ಲಿ ಮಹಿಳೆಯರಿಗೆ ಮಾತ್ರ ರಾಜ್ಯದ ಎಲ್ಲಾ ಕಡೆ ಉಚಿತ ಪ್ರಯಾಣ ವ್ಯವಸ್ಥೆ ಕಲ್ಪಿಸಲಾಗಿದೆ. ಇದೀಗ ಆರ್ಥಿಕ ಪರಿಸ್ಥಿತಿ ಸುಧಾರಣೆ ಆದರೆ ಗಂಡು ಮಕ್ಕಳಿಗೂ ಉಚಿತ ಪ್ರಯಾಣದ ಕುರಿತು ಚಿಂತನೆ ನಡೆಸಲಾಗುತ್ತೆ ಎಂದು ಪ್ರೌಢಶಾಲಾ ಕಟ್ಟಡ ಉದ್ಘಾಟನೆ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಹೇಳಿದ್ದಾರೆ. ನಾವು ಯಾವುದೇ ಗ್ಯಾರೆಂಟಿ ಯೋಜನೆಗಳಿಗೆ ವಿರೋಧ ಮಾಡುತ್ತಿಲ್ಲ. ಅಭಿವೃದ್ಧಿ ಬಗ್ಗೆ ಮಾತಾಡಿದರೆ ಏನೇನೋ ಮಾತನಾಡುತ್ತಾರೆ. ಶಿಕ್ಷಣ ಸಚಿವ ಮಧು ಬಂಗಾರಪ್ಪ ಬಗ್ಗೆ ಎಷ್ಟೋ ಟೀಕೆ ಮಾಡಿದರು ಎಂದು ಹೇಳಿಕೆ ನೀಡಿದರು.



# ಚಿಕ್ಕಮಗಳೂರಿಗೆ ಶರಣ್ ಪಂಪ್‌ವೆಲ್‌ಗೆ ನಿರ್ಬಂಧ : ಆಕ್ರೋಶ

ಚಿಕ್ಕಮಗಳೂರು: ಜಿಲ್ಲೆಗೆ ವಿ.ಎಚ್.ಪಿ ಮುಖಂಡ ಶರಣ್ ಪಂಪ್‌ವೆಲ್‌ಗೆ ನಿರ್ಬಂಧ ವಿಧಿಸಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕಚೇರಿ ಸುತ್ತಮುತ್ತ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದೆ. ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲು ಕಾರ್ಯಕರ್ತರು ಆಗಮಿಸುತ್ತಿದ್ದು ಇದರ ಬೆನ್ನಲ್ಲೇ ಜಿಲ್ಲಾಧಿಕಾರಿ ಕಚೇರಿ ಸುತ್ತ ಇನ್ನೂರಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿ



ಸಲಾಗಿದ್ದು ಜೊತೆಗೆ ಜಿಲ್ಲಾಧಿಕಾರಿ ಮಾರ್ಗವನ್ನು ಬ್ಯಾರಿಕೇಡ್ ಇಟ್ಟು ಬಂದ್ ಮಾಡಿ ಕಾರ್ಯಕರ್ತರನ್ನು ತಡೆ ಹಿಡಿಯಲಾಗಿದೆ. ಇನ್ನು ಮನವಿ ಕೊಡಲು ಬಂದವರನ್ನು ಅರ್ಧ ದಾರಿಯಲ್ಲೇ ತಡೆದಿರುವುದನ್ನು ಖಂಡಿಸಿ ಜಿಲ್ಲಾಡಳಿತದ ವಿರುದ್ಧ ಭಜರಂಗದಳ, ವಿ. ಎಚ್.ಪಿ. ಕಾರ್ಯಕರ್ತರು ತಮ್ಮ ಆಕ್ರೋಶ ಹೊರಹಾಕಿದ್ದಾರೆ.

# ವಿದೇಶಿ ವಲಸಿಗರನ್ನು ವಾಪಸ್ ಕಳುಹಿಸುತ್ತೇವೆ: ಜಿ. ಪರಮೇಶ್ವರ್



ಬೆಂಗಳೂರು: ಗುಜರಾತ್ ರೀತಿಯೇ ನಾವೂ ಅಕ್ರಮ ನುಸುಳುಕೋರರನ್ನು ವಾಪಸ್ ಕಳಿಸುತ್ತೇವೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ತಿಳಿಸಿದರು. ಸದಾಶಿವನಗರ ನಿವಾಸದ ಬಳಿ ಮಾತನಾಡಿದ ಅವರು, ಅಕ್ರಮ ನುಸುಳುಕೋರರ ಗಡಿಪಾರು ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಅವರನ್ನೆಲ್ಲ ಗಡಿಪಾರು ಮಾಡುವ ಪ್ರಕ್ರಿಯೆ ನಡೆದಿದೆ. ಈಗಾಗಲೇ 200ಕ್ಕೂ ಹೆಚ್ಚು ಜನ ಅನಧಿಕೃತವಾಗಿ ತಂಗಿರುವುದು ಪತ್ತೆಯಾಗಿದೆ. ಅಕ್ರಮವಾಗಿ ನೆಲೆಸಿರುವ ವಿದೇಶಿಯರನ್ನು ಗಡಿಪಾರು ಮಾಡುತ್ತಿದ್ದೇವೆ. ನಮ್ಮಲ್ಲೂ ಹೆಚ್ಚು ನುಸುಳುಕೋರರು ಇದ್ದರೆ ವಾಪಸ್ ಅವರ ದೇಶಕ್ಕೆ ಕಳುಹಿಸುತ್ತೇವೆ ಎಂದರು.

# ಬಾಲ್ಯ ವಿವಾಹಕ್ಕೆ ನಿಯಂತ್ರಣ ಹಾಕಲು ಕಠಿಣ ಮಸೂದೆ

ಬೆಂಗಳೂರು: ರಾಜ್ಯದಲ್ಲಿ ಬಾಲ್ಯ ವಿವಾಹದ ಪ್ರಮಾಣ ವರ್ಷಂಪ್ರತಿ ಹೆಚ್ಚುತ್ತಲೇ ಇದೆ. ಅಧಿಕಾರಿಗಳು ಎಷ್ಟೇ ಜಾಗೃತಿ ಮೂಡಿಸಿದರೂ ಬಾಲ್ಯ ವಿವಾಹಕ್ಕೆ ಕಡಿವಾಣ ಹಾಕಲು ಸಾಧ್ಯವಾಗುತ್ತಿಲ್ಲ. ಇದನ್ನು ಗಂಭೀರವಾಗಿ ಪರಿಗಣಿಸಿರುವ ರಾಜ್ಯ ಸರ್ಕಾರ ಬಾಲ್ಯ ವಿವಾಹ ನಿಷೇಧ, 2025 ಕರಡು ಮಸೂದೆ ಸಿದ್ಧಪಡಿಸಿದೆ.



ಆಧುನಿಕ ಕಾಲಮಾನದಲ್ಲೂ ಬಾಲ್ಯ ವಿವಾಹದಂತಹ ಸಾಮಾಜಿಕ ಪಿಡುಗು ಅವ್ಯಾಹತವಾಗಿ ಮುಂದುವರೆದಿದೆ. ಕರ್ನಾಟಕದಂತಹ ಪ್ರಗತಿಪರ ರಾಜ್ಯದಲ್ಲೂ ಅನಿಷ್ಟ ಪದ್ಧತಿ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಲೇ ಇದೆ. ರಾಜ್ಯ ಸರ್ಕಾರ ಈ ಸಾಮಾಜಿಕ ಪಿಡುಗನ್ನು ನಿಯಂತ್ರಿಸಲು ಹಲವು ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ.

# ಒಬಿಸಿ ಸಲಹಾ ಮಂಡಳಿ ಅಧ್ಯಕ್ಷರಾಗಿ ಯಾವುದೇ ನೇಮಕಾತಿ ಆಗಿಲ್ಲ

ಬೆಂಗಳೂರು: ಸಿಎಂ ಸಿದ್ದರಾಮಯ್ಯ ಅವರನ್ನು ಎಐಸಿಸಿಯ ಒಬಿಸಿ ಸಲಹಾ ಮಂಡಳಿ ಅಧ್ಯಕ್ಷರಾಗಿ ನೇಮಕ ಮಾಡಿಲ್ಲ ಎಂದು ಮುಖ್ಯಮಂತ್ರಿ ಕಚೇರಿ ಸ್ಪಷ್ಟಪಡಿಸಿದೆ. ಈ ಸಂಬಂಧ ಸ್ಪಷ್ಟೀಕರಣ ಹೊರಡಿಸಿರುವ ಸಿಎಂ ಮಾಧ್ಯಮ ವಿಭಾಗ, ಎಐಸಿಸಿಯ ಒಬಿಸಿ ಸಲಹಾ ಮಂಡಳಿ ಅಧ್ಯಕ್ಷರಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೇಮಕಗೊಂಡಿದ್ದಾರೆ ಎಂಬ ಸುದ್ದಿ ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿದೆ. ಅಂತಹ ಯಾವುದೇ ನೇಮಕಾತಿಯೂ ಆಗಿಲ್ಲ ಎಂದು ತಿಳಿಸಿದೆ. ಸಲಹಾ ಮಂಡಳಿ ಸಭೆ ಎಐಸಿಸಿ ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷರಾದ ಡಾ. ಅನಿಲ್ ಜೈಹಿಂದ್ ಅಧ್ಯಕ್ಷತೆಯಲ್ಲಿ ಜುಲೈ 15ರಂದು ಬೆಂಗಳೂರಿನಲ್ಲಿ ನಡೆಯಲಿದೆ.



# ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಜಮೀನಿನ ಸ್ವಾಧೀನ ಪ್ರಕ್ರಿಯೆ ರದ್ದು

ಬೆಂಗಳೂರು: ಇಸ್ರೋ ಕಾರ್ಯಚಟುವಟಿಕೆಗಳನ್ನು ವಿಸ್ತರಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲೂಕಿನ ಅಬ್ಬಚಿಕ್ಕನಹಳ್ಳಿ ಮತ್ತು ಲಾಲಗೊಂಡನಹಳ್ಳಿ ಗ್ರಾಮಗಳಲ್ಲಿನ 81 ಎಕರೆ ಜಮೀನಿನ ಸ್ವಾಧೀನ ಪ್ರಕ್ರಿಯೆಯನ್ನು ಹೈಕೋರ್ಟ್ ರದ್ದುಪಡಿಸಿ ಆದೇಶಿಸಿದೆ. ಇದರಿಂದ ಈ ಎರಡೂ ಗ್ರಾಮಗಳಲ್ಲಿ ಭೂಮಿ ಕಳೆದುಕೊಳ್ಳುವ ಭೀತಿಯಲ್ಲಿದ್ದ ಭೂಮಾ




ಲೀಕರು ನಿರಾಳರಾಗಿದ್ದಾರೆ. ಪ್ರಾಥಮಿಕ ಅಧಿಸೂಚನೆಯಾದ ಒಂದು ವರ್ಷದಲ್ಲಿ ಅಂತಿಮ ಅಧಿಸೂಚನೆ ಹೊರಡಿಸಿದ ಹಿನ್ನೆಲೆಯಲ್ಲಿ ಭೂ ಸ್ವಾಧೀನ ಪ್ರಕ್ರಿಯೆ ರದ್ದು ಮಾಡಬೇಕು ಎಂದು ಕೋರಿ ದೇವನಹಳ್ಳಿ, ಬೆಂಗಳೂರು ಮತ್ತು ಹೈದ್ರಾಬಾದ್ ಮೂಲಕ ಭೂಮಾಲಿಕರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

# ಮೇಕೆದಾಟು ಯೋಜನೆಗೆ ಒಪ್ಪಿಗೆ ಕೊಡಿಸುತ್ತೇನೆ : ಹೆಚ್.ಡಿ.ಕೆ



ಮೈಸೂರು : ನಾನು ಐದೇ ನಿಮಿಷದಲ್ಲಿ ಪ್ರಧಾನ ಮಂತ್ರಿಗಳಿಂದ ಮೇಕೆದಾಟು ಯೋಜನೆಗೆ ಒಪ್ಪಿಗೆ ಕೊಡಿಸುತ್ತೇನೆ. ಆದರೆ ರಾಜ್ಯದ ಕಾಂಗ್ರೆಸ್ ಸರ್ಕಾರಕ್ಕೆ ಶಕ್ತಿಯಿದ್ದರೆ ತಮಿಳುನಾಡಿನ ತಮ್ಮ ಮೈತ್ರಿ ಪಕ್ಷವನ್ನು ಮೇಕೆದಾಟು ಯೋಜನೆಗೆ ಒಪ್ಪಿಸಲಿ ಎಂದು ಕೇಂದ್ರ ಸಚಿವ ಹೆಚ್. ಡಿ. ಕುಮಾರಸ್ವಾಮಿ ಅವರು ರಾಜ್ಯ ಸರ್ಕಾರಕ್ಕೆ ಸವಾಲು ಹಾಕಿದ್ದಾರೆ. ನಗರದಲ್ಲಿಂದು ದಿಶಾ ಸಭೆಗೆ ಭಾಗವಹಿಸಲು ಆಗಮಿಸಿದ್ದ ವೇಳೆ ಜಿಲ್ಲಾ ಪಂಚಾಯತ್ ಕಚೇರಿಯ ಬಳಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನನ್ನ ಹಳೆಯ ಮಾತಿಗೆ ಬದ್ಧನಾಗಿದ್ದೇನೆ. ಕಾಂಗ್ರೆಸ್‌ನವರಿಗೆ ತಮಿಳು ನಾಡು ಸರ್ಕಾರವನ್ನು ಒಪ್ಪಿಸುವ ಶಕ್ತಿಯಿಲ್ಲ ಎಂದರು.

# ಸಿಖ್ ವಿರೋಧಿ ದಂಗೆಯಲ್ಲಿ ನಾನು ಭಾಗಿಯಾಗಿರಲಿಲ್ಲ : ಸಜ್ಜನ್ ಕುಮಾರ್

ನವದೆಹಲಿ: ನನ್ನ ಮೇಲೆ ಹೊರಿಸಿರುವ ಆರೋಪಗಳಲ್ಲಿ ನಾನೆಂದೂ ಭಾಗಿಯಾಗಿಲ್ಲ. ನಾನು ಅಮಾಯಕ ಎಂದು 1984ರ ಸಿಖ್ ವಿರೋಧಿ ದಂಗೆಯ ವೇಳೆ ದೆಹಲಿಯ ಜನಕಪುರಿ ಮತ್ತು ವಿಕಾಸ್ ಪುರಿಯಲ್ಲಿ ನಡೆದ ಹಿಂಸಾಚಾರದ ಪ್ರಮುಖ ಆರೋಪಿ ಹಾಗೂ ಮಾಜಿ ಕಾಂಗ್ರೆಸ್ ನಾಯಕ ಸಜ್ಜನ್ ಕುಮಾರ್



ಇಂದು ಕೋರ್ಟ್ ನಲ್ಲಿ ತಮ್ಮ ಹೇಳಿಕೆ ದಾಖಲಿಸಿದರು. ಇಲ್ಲಿನ ರೋಸ್ ಅವೆನ್ಯೂ ಕೋರ್ಟ್‌ನಲ್ಲಿ ವಿಶೇಷ ನ್ಯಾಯಮೂರ್ತಿ ದಿಗ್ ವಿನಯ್ ಸಿಂಗ್ ಅವರ ಮುಂದೆ ಹಾಜರಾದ 77 ವರ್ಷದ ಸಜ್ಜನ್ ಕುಮಾರ್, ನಾನು ಅಮಾಯಕ. ಇಂಥ ಅಪರಾಧಗಳಲ್ಲಿ ನಾನು ಭಾಗಿಯಾಗಿರಲಿಲ್ಲ ಎಂದರು.

# 90,000ಕ್ಕೂ ಹೆಚ್ಚು ಜನರಿಂದ ಅಮರನಾಥ ಯಾತ್ರೆ

ಶ್ರೀ ನಗರ: ಅಮರನಾಥ ಯಾತ್ರೆ ಕಳೆದ ಐದು ದಿನಗಳಿಂದ ಶಾಂತಿಯುತವಾಗಿ ಮುಂದುವರೆದಿದ್ದು, ಯಾತ್ರಿಕರ ಸಂಖ್ಯೆ ಹೆಚ್ಚುತ್ತಿದೆ. 7,541 ಯಾತ್ರಾರ್ಥಿಗಳ ಮತ್ತೊಂದು ತಂಡ ಮಂಗಳವಾರ ಕಾಶ್ಮೀರಕ್ಕೆ ಹೊರಟಿದೆ. ಜುಲೈ 3 ರಂದು ಯಾತ್ರೆ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ 90,000ಕ್ಕೂ ಹೆಚ್ಚು ಜನರು ಯಾತ್ರೆಯನ್ನು ನಿರ್ವಹಿಸಿದ್ದಾರೆ. 7,541 ಯಾತ್ರಿಗಳ ಮತ್ತೊಂದು ಬ್ಯಾಚ್ ಮಂಗಳವಾರ ಜಮ್ಮುವಿನ ಭಗವತಿ ನಗರ ಯಾತ್ರಿ ನಿವಾಸದಿಂದ ಎರಡು ಬೆಂಗಾವಲು ಬೆಂಗಾವಲುಗಳಲ್ಲಿ ಕಣಿವೆಗೆ ಹೊರಟಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



# ಹಿಮಾಚಲ ಪ್ರದೇಶದ ಮಂಡಿಯ ಮೇಘಸ್ಫೋಟದಿಂದಾಗಿ 72 ಮಂದಿ ಸಾವು

ಶಿಮ್ಲಾ: ಹಿಮಾಚಲ ಪ್ರದೇಶದ ಮಂಡಿಯಲ್ಲಿ ಉಂಟಾದ ಮೇಘಸ್ಫೋಟದಿಂದಾಗಿ 72 ಮಂದಿ ಸಾವನ್ನಪ್ಪಿದ್ದಾರೆ. ಸತತವಾಗಿ ಸುರಿದ ಮಳೆಗೆ ಸಾಕಷ್ಟು ಹಾನಿಯಾಗಿದೆ ಎಂದು



ಉಪ ಮುಖ್ಯಮಂತ್ರಿ ಮುಕೇಶ್ ಅಗ್ನಿಹೋತ್ರಿ ತಿಳಿಸಿದರು. ಅದರಲ್ಲೂ ಮಂಡಿ ಜಿಲ್ಲೆ ಮಹಾಮರಣದ ಮಳೆಯಿಂದ ನಲುಗಿದ್ದು, ಎಲ್ಲವೂ ನಾಶವಾಗಿದೆ.



ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## "ಧರ್ಮ ಚಾವಡಿ" ತುಳು ಚಿತ್ರ ತರೆಗೆ..



ಕೃಷ್ಣವಾಣಿ ಪಿಕ್ಚರ್ಸ್ ಲಾಂಛನದಲ್ಲಿ ತಯಾರಾದ ನಡುಬೈಲ್ ಜಗದೀಶ್ ಅಮೀನ್ ನಿರ್ಮಾಣದಲ್ಲಿ ನಿತಿನ್ ರೈ ಕುಕ್ಕವಳ್ಳಿ ನುಳಿಯಾಲು ನಿರ್ದೇಶನದಲ್ಲಿ ತಯಾರಾದ "ಧರ್ಮ ಚಾವಡಿ" ತುಳು ಚಿತ್ರ ಜುಲೈ 11 ರಂದು ಬಿಡುಗಡೆಗೊಳ್ಳಲಿದೆ ಎಂದು ಹಿರಿಯ ನಟ ರಮೇಶ್ ರೈ ಕುಕ್ಕುವಳ್ಳಿ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು. ಚಿತ್ರ ನಿರ್ದೇಶಕ ನಿತಿನ್ ರೈ ಕುಕ್ಕವಳ್ಳಿ ಮಾತಾಡಿ, "ಇದು ನನ್ನ ಎರಡನೇ ಚಿತ್ರ, ಚಿತ್ರದ ಟೀಸರ್ ಪ್ರೇಕ್ಷಕರ ಮೆಚ್ಚುಗೆ ಗಳಿಸಿದ್ದು ಮುಂಬೈಯಲ್ಲಿ ಸಿನಿಮಾದ ಪ್ರೀಮಿಯರ್ ಶೋ ವೀಕ್ಷಿಸಿದ ಪ್ರೇಕ್ಷಕರು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ. ಸಿನಿಮಾ ಹೊಸ ನಿರೀಕ್ಷೆಯನ್ನು ಹುಟ್ಟು ಹಾಕಿದೆ. ಮೊದಲಿಗೆ ದಕ್ಷಿಣ ಕನ್ನಡ ಉಡುಪಿಯ ಎಲ್ಲಾ ಚಿತ್ರಮಂದಿರಗಳಲ್ಲಿ ಚಿತ್ರ ತೆರೆಕಾಣುತ್ತಿದ್ದು, ಮುಂದಿನ ವಾರ ಕಾಸರಗೋಡಿನಲ್ಲಿ ಬಿಡುಗಡೆ ಮಾಡಲಾಗುತ್ತದೆ ಎಂದರು.

## ಆಪರೇಷನ್ ಡ್ರೀಮ್ ಥಿಯೇಟರ್‌ನಲ್ಲಿ ಶಿವಣ್ಣ..



666 ಆಪರೇಷನ್ ಡ್ರೀಮ್ ಥಿಯೇಟರ್‌ನಲ್ಲಿ ಶಿವಣ್ಣ ಹೊಸ ಗೆಟಪ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಸೂಟ್ ಧರಿಸಿ, ಕೈಯಲ್ಲಿ ವಿಂಟೇಜ್ ರಿವಾಲ್ವರ್ ಹಿಡಿದು ತೀಕ್ಷ್ಣ ನೋಟದೊಂದಿಗೆ ಹೆಜ್ಜೆ ಹಾಕುತ್ತಾ ಸ್ಟೈಲೀಶ್ ಆಗಿರುವ ಪಾತ್ರವನ್ನು ಚಿತ್ರತಂಡ ತಮ್ಮ ಸೋಷಿಯಲ್ ಮೀಡಿಯಾ ಖಾತೆಯಲ್ಲಿ ಬಿಡುಗಡೆ ಮಾಡಿದೆ. ಶಿವಣ್ಣ ಲುಕ್ ನೋಡ್ತಿದ್ರೆ ಡಾ. ರಾಜ್ ಕುಮಾರ್ ಅವರ 999ರ ಬ್ಲಾಕ್ ಬಸ್ಟರ್ ಸ್ಪೈ ಚಿತ್ರಗಳ ರೀತಿಯೇ ಅವರು ಕೂಡ ಸ್ಪೈ ಪಾತ್ರ ಮಾಡುತ್ತಿದ್ದಾರೆ ಎಂಬ ಸುಳಿವನ್ನು ಚಿತ್ರತಂಡ ಬಿಟ್ಟುಕೊಟ್ಟಿದೆ. ಶಿವಣ್ಣ ಪ್ರತಿ ಸಿನಿಮಾದಲ್ಲಿಯೂ, ಬೇರೆಯದ್ದೇ ರೀತಿಯಲ್ಲಿ ಪಾತ್ರ ಮಾಡುತ್ತಿದ್ದಾರೆ. 666 ಆಪರೇಷನ್ ಡ್ರೀಮ್ ಥಿಯೇಟರ್‌ನಲ್ಲಿನ ಪಾತ್ರ ತುಂಬಾ ಡಿಫರೆಂಟಾಗಿದೆ. ಹೇಮಂತ್ ಎಂ ರಾವ್ ಸಾರಥ್ಯದಲ್ಲಿ ಈ ಚಿತ್ರ ನಿರ್ಮಾಣವಾಗುತ್ತಿದೆ.

## ಅಕ್ಟೋಬರ್ 2ಕ್ಕೆ ಕಾಂತಾರ ಚಾಪ್ಟರ್ 1..

ಸ್ಯಾಂಡಲ್‌ವುಡ್ ನಟ, ನಿರ್ದೇಶಕ ರಿಷಬ್ ಶೆಟ್ಟಿ ಬರ್ತ್‌ಡೇಗೆ ಬಿಗ್ ಸರ್ಪ್ರೈಸ್ ಸಿಕ್ಕಿದೆ. ಹೊಂಬಾಳೆ ಫಿಲಂಸ್ ಬ್ಯಾನರ್‌ನಲ್ಲಿ ದೊಡ್ಡ ಮಟ್ಟದಲ್ಲಿ ನಿರ್ಮಾಣವಾಗುತ್ತಿರುವ "ಕಾಂತಾರ ಚಾಪ್ಟರ್ 1" ಇದೇ 2025ರ ಅಕ್ಟೋಬರ್ 2ರಂದು ವಿಶ್ವದಾದ್ಯಂತ ತೆರೆಗೆ ಬರಲಿದೆ. ರಿಷಬ್ ಶೆಟ್ಟಿ ಜನ್ಮ ದಿನದ ಪ್ರಯುಕ್ತ ಈ ವಿಚಾರವನ್ನು ಅಧಿಕೃತವಾಗಿ ಹಂಚಿಕೊಂಡಿದೆ ಹೊಂಬಾಳೆ ಫಿಲಂಸ್. 2022ರಲ್ಲಿ ಬಿಡುಗಡೆಯಾದ "ಕಾಂತಾರ" ಭಾರತೀಯ ಚಿತ್ರರಂಗದಲ್ಲಿ ಹೊಸ ದಾಖಲೆ ಬರೆದಿತ್ತು. ನಿಸರ್ಗ, ಸಂಸ್ಕೃತಿ ಮತ್ತು ಆಧ್ಯಾತ್ಮದ ಹಿನ್ನಲೆಯಲ್ಲಿ ಮೂಡಿಬಂದ ಚಿತ್ರಕ್ಕೆ ದೊಡ್ಡ ಮಟ್ಟದ ಮೆಚ್ಚುಗೆ ಸಿಕ್ಕಿತ್ತು. ಬಾಕ್ಸ್ ಆಫೀಸ್‌ನಲ್ಲಿಯೂ ಹವಾ ಸೃಷ್ಟಿಸಿತ್ತು. ಆರಂಭದಲ್ಲಿ ಕನ್ನಡದಲ್ಲಿ ಮಾತ್ರ ತೆರೆಕಂಡಿದ್ದ ಕಾಂತಾರ, ಪ್ಯಾನ್ ಇಂಡಿಯಾ ಅವತಾರ ತಾಳಿತ್ತು. ಈಗ ಕಾಂತಾರ 1 ಅದಕ್ಕಿಂತಲೂ ಹೆಚ್ಚಿನ ಕುತೂಹಲ ಮೂಡಿಸಿದೆ.



## ಸಂಗೀತ ಬಾರ್ & ರೆಸ್ಟೋರೆಂಟ್‌ನಲ್ಲಿ ಕೋಮಲ್..

ನಟ ಕೋಮಲ್ ಕುಮಾರ್ ಸದ್ದಿಲ್ಲದೆ ಹೊಸಚಿತ್ರದ ಮೂಲಕ ಪ್ರೇಕ್ಷಕರ ಮುಂದೆ ಬರಲು ತಯಾರಾಗಿದ್ದಾರೆ. ಕೋಮಲ್ ನಾಯಕನಾಗಿ ಅಭಿನಯಿಸುತ್ತಿರುವ ಹೊಸ ಚಿತ್ರಕ್ಕೆ 'ಸಂಗೀತ ಬಾರ್ ಅಂಡ್ ರೆಸ್ಟೋರೆಂಟ್' ಎಂದು ಹೆಸರಿಡಲಾಗಿದ್ದು, ಇದೀಗ ಈ ಸಿನಿಮಾದ ಟೈಟಲ್ ಪೋಸ್ಟರ್ ಪ್ರೋಮೋ ಮತ್ತು ಫಸ್ಟ್ ಲುಕ್ ಬಿಡುಗಡೆಯಾಗಿದೆ. ಈ ಹಿಂದೆ 'ಕತ್ತಲೆ ಕೋಣೆ', 'ಇನಾಂದಾರ್', 'ಗುಂಮ್ಟಿ' ಚಿತ್ರಗಳನ್ನು ನಿರ್ದೇಶಿಸಿದ್ದ ಯುವ ನಿರ್ದೇಶಕ ಸಂದೇಶ್ ಶೆಟ್ಟಿ ಆಜ್ರಿ ಈ ಸಿನಿಮಾಕ್ಕೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. 'ಜ್ಯೋತಿ ಪ್ರೊಡಕ್ಷನ್ಸ್' ಬ್ಯಾನರಿನಲ್ಲಿ ವಿಕಾಸ್ ಎಸ್. ಶೆಟ್ಟಿ ಈ ಚಿತ್ರಕ್ಕೆ ಬಂಡವಾಳ ಹೂಡಿ ನಿರ್ಮಿಸುತ್ತಿದ್ದಾರೆ.'ಸಂಗೀತ ಬಾರ್ ಅಂಡ್ ರೆಸ್ಟೋರೆಂಟ್' ಚಿತ್ರದ ಹಾಡುಗಳಿಗೆ ಪ್ರಾಂಶು ಜಾ ಸಂಗೀತ ಸಂಯೋಜನೆ ಸಜೀಶ್ ರಾಜ್ ಛಾಯಾಗ್ರಹಣ, ಶಿವರಾಜ್ ಮೇಹು ಸಂಕಲನವಿದೆ.











Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212